ಬೆಂಗಳೂರು,
ಕೋಲಾರ,
ಹಾಸನ,
ಚಿತ್ರದುರ್ಗ,
ದಾವಣಗೆರೆ,
ವಿಜಯನಗರ,
ಬಳ್ಳಾರಿ,
ರಾಯಚೂರು,
ವಿಜಯಪುರ,
ಕಲಬುರ್ಗಿ

ದಶಕದ ನಡಿಗೆ...

RNI No: KARKAN/2014/54928

ನೊಂದವರ ಧ್ವನಿ

# ಸಹಾಯ ವಾಣಿ

www.sahayavani.com SAHAYAVANI

Postal Registration N.o KA/BGW--1862/2024-26

KANNADA DAILY PAPER

ಕನ್ನಡ ದಿನಪತ್ರಿಕೆ

ಸಂಪುಟ: 11
Vol:11
ಸಂಚಿಕೆ: 126
Issuse:126
ದಿನಾಂಕ:22-06-2024
Date:22-06-2024
ಶನಿವಾರ Satrday
ಪುಟ:4 Page:4
ರೂ.: 3-00 Rs.3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪಸಂಪಾದಕರು: ಸುಚಿತ್ರ ಎಸ್. ಒಡೆಯರ್ ಎಂಬಿಎ ಗೌರವ ಸಂಪಾದಕರು: ಗುರುರಾಜು ಎಂ., ಫೋ: 080-31212322 ಮೊ.: 9902543494 E-mail:sahayavany@gmail.com



**10ನೇ ಅಂತಾರಾಷ್ಟ್ರೀಯ ಯೋಗದಿನ.....**

ಜಮ್ಮು-ಕಾಶ್ಮೀರದ ದಾಲ್‌ಲೇಕ್ ಸರೋವರದಲ್ಲಿ ಪ್ರಧಾನಮಂತ್ರಿ ನರೇಂದ್ರಮೋದಿ ಅವರು ಯೋಗಾಭ್ಯಾಸದಲ್ಲಿ ಧ್ಯಾನ ನಿರತರಾಗಿದ್ದಾರೆ.




ಬಳ್ಳಾರಿಯ ಜೆಎಸ್‌ಡಬ್ಲ್ಯೂ ಟೌನ್‌ಶಿಪ್‌ನಲ್ಲಿ ಆಯೋಜಿಸಿದ ಯೋಗ ದಿನಾಚರಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲ್ಗೊಂಡರು. ವಚನಾನಂದಸ್ವಾಮೀಜಿ, ಸಚಿವ ಸಂತೋಷ್ ಲಾಡ್, ಮುಖ್ಯಮಂತ್ರಿಗಳ ಕಾರ್ಯದರ್ಶಿ ಗೋವಿಂದರಾಜು ಹಾಗೂ ನಟಿ ಶ್ರೀಲೀಲಾ ಭಾಗವಹಿಸಿದ್ದರು.




ಅಂತಾರಾಷ್ಟ್ರೀಯ ಯೋಗದಿನಾಚರಣೆ ನಿಮಿತ್ತ ವಿಧಾನಸೌಧದ ಮುಂಭಾಗ ಶುಕ್ರವಾರ ನಡೆದ ಯೋಗೋತ್ಸವದಲ್ಲಿ ರಾಜ್ಯಪಾಲರಾದ ಥಾವರ್ ಚಂದ್ ಗೆಹಲೋಟ್, ಡಿಸಿಎಂ ಡಿ.ಕೆ. ಶಿವಕುಮಾರ್, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಚಿವ ದಿನೇಶ್ ಗುಂಡೂರಾವ್, ಎಂಎಲ್ಸಿ ಶರವಣ, ಕ್ರೀಡಾಪಟು ಅಶ್ವಿನಿ ನಾಚಪ್ಪ, ಕ್ರಿಕೆಟಿಗ ಮನೀಶ್ ಪಾಂಡೆ, ಚಿತ್ರನಟಿ ಅನುಪ್ರಭಕರ್, ನಟ ಶರನ್ ಮತ್ತಿತರರು ಭಾಗವಹಿಸಿದ್ದರು.

# ಯೋಗ ವಿಶ್ವ ಕ್ಷೇಮದ ರಾಯಭಾರಿ

## ಶ್ರೀನಗರದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಮೋದಿ ಚಾಲನೆ

ಶ್ರೀನಗರ:-

ಇಡೀ ವಿಶ್ವವೇ ಯೋಗವನ್ನು ಜಾಗತಿ-ಕ ಕ್ಷೇಮದ ರಾಯಭಾರಿಯಂತೆ ನೋಡುತ್ತಿರುವುದಾಗಿ ಹೇಳಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಯವರು ಜನರು ತಮ್ಮ ವೈಯಕ್ತಿಕ ಯೋಗಕ್ಷೇಮಕ್ಕೂ ಸಮಾಜದ ಕಲ್ಯಾಣಕ್ಕೂ ಸಂಬಂಧವಿದೆ ಎಂಬುದು ಅರ್ಥೈಸಲು ಯೋಗ ನೆರವಾಗಲಿದೆ ಎಂದು ಬಣ್ಣಿಸಿದ್ದಾರೆ.

ಸತತ ಮೂರನೇ ಬಾರಿ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಮೊದಲ ಸಲ ಕಾಶ್ಮೀರಕ್ಕೆ ಭೇಟಿ ನೀಡಿದ್ದಾರೆ. ಶ್ರೀನಗರದ ಶೇರ್-ಇ-ಕಾಶ್ಮೀರ್ ಇಂಟರ್ ನ್ಯಾಷನಲ್ ಕಾನ್ಫರೆನ್ಸ್ ಸೆಂಟರ್ -ಎಸ್‌ಕೆಐಸಿಸಿನಲ್ಲಿ 10ನೇ ಅಂತರಾಷ್ಟ್ರೀಯ ಯೋಗ ದಿನಾಚಾರಣೆಗೆ ಚಾಲನೆ ನೀಡಿದರು.

ಅವರು ಗತಕಾಲದಿಂದ ಹೊರಬಂದು ವರ್ತಮಾನದಲ್ಲಿ ಬದುಕಲು ಯೋಗ ಸಹಾಯ ಮಾಡಲಿದೆ. ಜಾಗತಿಕ ಒಳಿತಿಗಾಗಿ ಯೋಗವನ್ನು ಪ್ರಬಲ ಏಜೆಂಟ್ ಎಂದು ಜಗತ್ತು ಎದುರು ನೋಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಇಂದಿಲ್ಲಿ ಹೇಳಿದ್ದಾರೆ. ಪ್ರಪಂಚದ ಕಲ್ಯಾಣದೊಂದಿಗೆ ತಮ್ಮ ಯೋಗಕ್ಷೇಮವನ್ನು ಯೋಗ ಹೊಂದಿದೆ ಎಂಬುದನ್ನು ಅರಿತುಕೊಳ್ಳಲು ಯೋಗ ಸಹಾಯ ಮಾಡಿದೆ ಯೋಗ

ಧ್ಯಾನದ ಭಾಗವಾಗಿದ್ದು ಏಕಾಗ್ರತೆ ಹೆಚ್ಚಿಸಲು ಸಹಕಾರಿಯಾಗಲಿದೆ. ಯೋಗದಿಂದ ಶಕ್ತಿ, ಉತ್ತಮ ಆರೋಗ್ಯ, ಯೋಗಕ್ಷೇಮ ವೃದ್ಧಿಸುತ್ತದೆ" ಹೀಗಾಗಿ ಯೋಗವನ್ನು ತಮ್ಮ ದೈನಂದಿನ ಜೀವನದ ಭಾಗವನ್ನಾಗಿ ಮಾಡಿಕೊಳ್ಳುವಂತೆ ದೇಶದ ಜನರಿಗೆ ಕರೆ ನೀಡಿದರು.

ಜಗತ್ತು ಹೊಸ ಯೋಗ ಆರ್ಥಿಕತೆ ಎದುರು ನೋಡುತ್ತಿದೆ. ರಿಷಿಕೇಶ ಮತ್ತು ಕಾಶಿಯಿಂದ ಕೇರಳದವರೆಗೆ, ಯೋಗ **-3ನೇ ಪುಟಕ್ಕೆ**

## ಸಂಪೂರ್ಣ ಯೋಗಮಯ

ದೇಶದ ವಿವಿಧ ಭಾಗಗಳಲ್ಲಿ 10ನೇ ಅಂತರಾಷ್ಟ್ರೀಯ ಯೋಗ ದಿನಾಚಾರಣೆಯನ್ನು ಶ್ರೀನಗರದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಮುನ್ನೆಡೆಸಿದರೆ ಇನ್ನುಳಿದ ಭಾಗಗಳಲ್ಲಿ ರಾಜ್ಯಪಾಲರು,ಕೇಂದ್ರ ಸಚಿವರು, ವಿವಿಧ ರಾಜ್ಯಗಳು ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು ಯೋಗ ದಿನಾಚಾರಣೆಯಲ್ಲಿ ಭಾಗಿಯಾಗಿ ಸಂಪೂರ್ಣ ಯೋಗಮಯವಾಗಿಸಿದರು.

ಗುಜರಾತ್‌ನ ಅಹಮದಾಬಾದ್‌ನಲ್ಲಿ ಕೇಂದ್ರಸಚಿವ ಅಮಿತ್ ಶಾ,ಕೇಂದ್ರ ಸಚಿವರಾದ ಜೆಪಿ ನಡ್ಡಾ, ಅಮಿತ್ ಶಾ, ಎಚ್.ಡಿ ಕುಮಾರಸ್ವಾಮಿ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಮಧ್ಯ ಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ಸೇರಿದಂತೆ ರಾಜ್ಯದ ಸಚಿವರು ಸೇರಿದಂತೆ ಗಣ್ಯರು ಯೋಗಭ್ಯಾಸದಲ್ಲಿ ಭಾಗಿಯಾಗಿ ಇತರರಿಗೆ ಸ್ಫೂರ್ತಿಯಾದರು.

ಕೋಲ್ಕತ್ತಾದ ರಾಜಭವನದಲ್ಲಿ ರಾಜ್ಯಪಾಲ ಆನಂದ್ ಬೋಸ್ ಸೇರಿದಂತೆ ಹಲವು ಮಂದಿ ಯೋಗಾಭ್ಯಾಸ ಮಾಡಿದರು. ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹ್ವಾಣ್ ಮಾತನಾಡಿ ಪ್ರಧಾನಿ ನರೇಂದ್ರ ಮೋದಿ ಅವರು ಯೋಗವನ್ನು ಅಂತರಾಷ್ಟ್ರೀಯ ಮಟ್ಟಕೆಕ ತೆಗೆದು-ಕೊಂಡು ಹೋಗಿದ್ದಾರೆ. ಹೀಗಾಗಿ ತಾವು ದಿನನಿತ್ಯ ಯೋಗಾಭ್ಯಾಸ ಮಾಡುತ್ತಿದ್ದೇನೆ ಎಂದಿದ್ದಾರೆ.

ಕೇಂದ್ರ ಸಚಿವ ಜ್ಯೋತಿರಾಧಿತ್ಯ ಸಿಂಧಿಯಾ ಮಾತನಾಡಿ ಪ್ರಧಾನಿ ನರೇಂದ್ರ ಮೋದಿ ಅವರು ಯೋಗಕ್ಕೆ ವಿಶ್ವದಲ್ಲಿ ವಿಶೇಷ ಸ್ಥಾನವನ್ನು ನೀಡಿದ್ದಾರೆ. ಯೋಗ ಭಾರತದ **-3ನೇ ಪುಟಕ್ಕೆ**

## ರಾಜಕೀಯ ಅಂತ್ಯ ಜನ ತೀರ್ಮಾನಿಸುತ್ತಾರೆ: ಡಿಕೆಶಿ

ಬೆಂಗಳೂರು:-



ಯಾವುದೇ ರಾಜಕಾರಣಿಗಳ ರಾಜಕೀಯ ಅಂತ್ಯ ತೀರ್ಮಾನ ಜನರು ಮಾಡುತ್ತಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾರ್ಮಿಕವಾಗಿ ಹೇಳಿದರು. ವಿಧಾನಸೌಧದ ಮುಂಭಾಗದಲ್ಲಿಂದು ನಡೆದ ಅಂತಾ ರಾಷ್ಟ್ರೀಯ ಯೋಗದಿನಾಚರಣೆಯಲ್ಲಿ ಪಾಲ್ಗೊಂಡು ಮಾತ ನಾಡಿದ ಅವರು, ನನ್ನ ರಾಜಕೀಯ ಅಂತ್ಯ ತೀರ್ಮಾನ ಮಾಡುವರು ಜನರು. ಬೇರೆ ಯಾರೂ ಅಲ್ಲ ಜನರೇ ನನ್ನ ಹಿಂದಿರುವ ಶಕ್ತಿ ಎಂದರು.

ಚನ್ನಪಟ್ಟಣ ಕ್ಷೇತ್ರದ ಉಪಚುನಾವಣೆಯಲ್ಲಿ ಡಿ.ಕೆ ಶಿವ ಕುಮಾರ್ ಸ್ಪರ್ಧಿಸಿದರೆ ಅಲ್ಲಿಗೆ ಅವರ ರಾಜಕೀಯ ಅಂತ್ಯವಾಗುತ್ತದೆ ಎಂಬ ಮಾಜಿ ಸಚಿವ ಸಿ.ಪಿ ಯೋಗೇಶ್ವರ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿ ಮಾತನಾಡಿದ ಅವರು, ಎಲ್ಲವನ್ನೂ ಜನ ತೀರ್ಮಾನಿಸುತ್ತಾರೆ. ಯೋಗೇಶ್ವರ್ ಅವರ ದೊಡ್ಡವರು. ಅವರ ಹೇಳಿಕೆಗೆ ನಾನು ಪ್ರತಿಕ್ರಿಯಿಸಲ್ಲ. ಎಲ್ಲವೂ ಜನರ ಕೈಯಲ್ಲಿದೆ ಎಂದರು. ನಾನು ರಾಮನಗರದವನು. ಚನ್ನಪಟ್ಟಣ ಜನರ ಮೇಲೆ ನನಗೆ ನಂಬಿಕೆ **-3ನೇ ಪುಟಕ್ಕೆ**

## ಈಗ ಚನ್ನಪಟ್ಟಣದ ಮೇಲೆ ಮಮತೆ ಬಂದಿದೆ: ಎಚ್‌ಡಿಕೆ ವ್ಯಂಗ್ಯ

ಬೆಂಗಳೂರು:-



ಚನ್ನಪಟ್ಟಣದ ಬಗ್ಗೆ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರಿಗೆ ಈಗ ಮಮತೆ ಬಂದಿದೆ ಎಂದು ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ವ್ಯಂಗ್ಯವಾಡಿದ್ದಾರೆ. ಕಳೆದ ಒಂದೂವರೆ ವರ್ಷದಿಂದ ಡಿ.ಕೆ ಶಿವಕುಮಾರ್ ಚನ್ನಪಟ್ಟಣಕ್ಕೆ ಹೋಗಿರಲಿಲ್ಲ. ಈಗ ಅವರಿಗೆ ಚನ್ನಪಟ್ಟಣದ ಬಗ್ಗೆ ಮಮತೆ ಬಂದಿದೆ ಎಂದು ಗೇಲಿ ಮಾಡಿದರು.

ನೋಯ್ಡಾದ ಬಿಹೆಚ್‌ಇಎಲ್ ಟೌನ್‌ಶಿಪ್‌ನಲ್ಲಿ ನಡೆದ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗಿಯಾದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚನ್ನಪಟ್ಟಣ ಅಭಿವೃದ್ಧಿ ಮಾಡಬೇಡಿ ಎಂದು ಡಿ.ಕೆ ಶಿವಕುಮಾರ್ ಅವರನ್ನು ತಡೆದಿದ್ದು ಯಾರು ಸಂಸದರಾಗಿ ಡಿಕೆ. ಶಿವಕುಮಾರ್ ಸಹೋದರನ **-3ನೇ ಪುಟಕ್ಕೆ**

## ರೇಣುಕಾಸ್ವಾಮಿ ಹತ್ಯೆ 28 ಸ್ಥಳಗಳಲ್ಲಿ ಮಹಜರು

ಬೆಂಗಳೂರು:-

ಚಿತ್ರದುರ್ಗದ ರೇಣುಕಾ ಸ್ವಾಮಿ ಕ್ರೂರ ಕೊಲೆ ಪ್ರಕರಣದ ಸಂಬಂಧ ನಟ ದರ್ಶನ್ ಮತ್ತವನ ಗ್ಯಾಂಗ್ ಸೇರಿದ 28 ಸ್ಥಳಗಳಲ್ಲಿ ಮಹಜರು ನಡೆಸಿ ಸಾಕ್ಷಿಯಾಗಿ 139ಕ್ಕೂ ಹೆಚ್ಚು ವಸ್ತುಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.

ಆರೋಪಿಗಳು ಧರಿಸಿದ್ದ ಬಟ್ಟೆ, ಶೆಡ್‌ನಲ್ಲಿ ಹಲ್ಲೆಗೆ ಬಳಸಿದ್ದ ಲಾಠಿ, ಮರದ ರಿಪೀಸ್ ವಸ್ತುಗಳು, ತುಳಿದ ಶೂಗಳು, ಆರೋಪಿಗಳು ತಂಗಿದ್ದ ಹೋಟೆಲ್ ಲೆಡ್ಜರ್ ಬುಕ್, ಸಿಸಿಟಿವಿ ರೆಕಾರ್ಡ್, ಕೃತ್ಯದ ವೇಳೆ ಹಾಗೂ ಶವ ಬಿಸಾಡಲು ಬಳಸಿದ್ದ ಕಾರುಗಳು, ಆರೋಪಿಗಳು ಪಡೆದುಕೊಂಡಿದ್ದ ಹಣ, ಆರೋಪಿಗಳ ಮೊಬೈಲ್ ಫೋನ್, ಕಾರ್ ಶೆಡ್ ಕಡೆ ಹೋಗುವ ಸಿಸಿಟಿವಿ ರೆಕಾರ್ಡ್, ಮೃತದೇಹದ ಮೇಲಿಂದ ಕಳುವಾಗಿದ್ದ ಚಿನ್ನಾಭರಣ ಸೇರಿ139 ವಸ್ತುಗಳನ್ನು ಜಪ್ತಿ ಮಾಡಲಾಗಿದೆ.

ಪ್ರಕರಣದಲ್ಲಿ ಇದುವರೆಗೂ 28 ಕಡೆ ಮಹಜರ್ ಮಾಡಲಾಗಿದೆ. ದರ್ಶನ್ ಸೇರಿ ಎಲ್ಲ 17 ಆರೋಪಿಗಳ ನಿವಾಸ ಹಾಗೂ ಬೇರೆ 11 ಸ್ಥಳಗಳಲ್ಲೂ ಮಹಜರ್ ನಡೆಸಲಾಗಿದೆ. ರೇಣುಕಾಸ್ವಾಮಿ ಕರೆತಂದು ಹಲ್ಲೆ ಕೃತ್ಯ ನಡೆಸಿದ ಪಟ್ಟಣಗೆರೆ ಶೆಡ್, ರೇಣುಕಾಸ್ವಾಮಿಯ ಶವ ಬಿಸಾಡಿದ ರಾಜಕಾಲುವೆ,ಶವ ಬಿಸಾಡಿದ್ದ ಆರೋಪಿಗಳು ತಂಗಿದ್ದ ಆರ್.ಆರ್.ನಗರದ ಹೋಟೆಲ್, ಪಾರ್ಟಿ ಮಾಡಿದ್ದ ಸ್ಟೋನಿಬ್ರೂಕ್ ರೆಸ್ಟೋರೆಂಟ್, ಅಪಹರಣ ಮಾಡಿದ್ದ ಚಿತ್ರದುರ್ಗದ ಸ್ಥಳ, ಮೈಸೂರಿನ ಖಾಸಗಿ ಹೋಟೆಲ್‌ಗಳಲ್ಲಿ ಸ್ಥಳ ಮಹಜರು ನಡೆಸಲಾಗಿದೆ.



ಜಪ್ತಿ ಮಾಡಿರುವ 139 ವಸ್ತುಗಳನ್ನು ಸೇರಿ ಮಹತ್ವದ ಟೆಕ್ನಿಕಲ್ ಸಾಕ್ಷಿಗಳನ್ನು ಅಧಿಕಾರಿಗಳು ಕಲೆಹಾಕಿದ್ದಾರೆ. ಹಲ್ಲೆ ಕೃತ್ಯ ನಡೆಯಲು ಪ್ರಮುಖ ಪ್ರಚೋದನಾ ವ್ಯಕ್ತಿ ಹಾಗೂ ಕೇಂದ್ರ ಬಿಂದು ಆಗಿರುವಳು ಪವಿತ್ರಾ ಗೌಡ ಎಂಬುದು ಬಯಲಾಗಿದ್ದು, ರೇಣುಕಾ ಸ್ವಾಮಿ ಜೊತೆಗೆ ನಡೆಸಿದ ಚಾಟಿಂಗ್ ಸಾಕ್ಷಿಯನ್ನು ಕಲೆಹಾಕಲಾಗಿದೆ.

**ಮೊಬೈಲ್ ಸಾಕ್ಷ್ಯ:**

ಪ್ರಕರಣ ಸಂಬಂಧ ನಟ ದರ್ಶನ್ ಆಪ್ತ ಪಟ್ಟಣಗೆರೆ ವಿನಯ್ ಮೊಬೈಲ್‌ನಲ್ಲಿ ಬಹುಮುಖ್ಯ ಸಾಕ್ಷ್ಯವನ್ನು ಪೊಲೀಸರು ಜಪ್ತಿ ಮಾಡಿದ್ದು, ಇದು ಕೂಡ ದರ್ಶನ್ ಗ್ಯಾಂಗ್‌ಗೆ ಕಂಟಕವಾಗಿದೆ ಎನ್ನಲಾಗಿದೆ. ಪಟ್ಟಣಗೆರೆ ವಿನಯ್ ಮೊಬೈಲ್ ಪತ್ತೆಯಾದ ಪುರಾವೆ ಕುರಿತು ಎಂದು ಕೋರ್ಟ್‌ಗೆ ಪೊಲೀಸರು ಮಾಹಿತಿ ನೀಡಿದ್ದಾರೆ. ಆದರೆ ಈ ಪುರಾವೆ ಕುರಿತು ವಿನಯ್ ವಿಚಾರಣೆ ನಡೆಸಬೇಕಿದೆ ಎಂದು ಪೊಲೀಸರು **-3ನೇ ಪುಟಕ್ಕೆ**

## ವಿದೇಶಿ ಕನ್ಸಲ್ಟೆನ್ಸಿ ನೇಮಕಕ್ಕೆ ಬಿವೈವಿ ಆಕ್ಷೇಪ

ಬೆಂಗಳೂರು:-




ರಾಜ್ಯದ ಹಣಕಾಸು ವ್ಯವಸ್ಥೆ ಮೇಲುಸ್ತುವಾರಿಗೆ ವಿದೇಶಿ ಕನ್ಸಲ್ಟೆನ್ಸಿನೇಮಕ ಮಾಡಿರುವುದನ್ನು ಟೀಕಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ರಾಜ್ಯದ ಹಣಕಾಸು ಮೇಲುಸ್ತುವಾರಿಗೆ ವಿದೇಶಿ ಕನ್ಸಲ್ಟೆನ್ಸಿನೇಮಕ ವಿಚಾರ ಆಶ್ಚರ್ಯ ಹಾಗೂ ಆಘಾತ ಕೂಡ ಆಗಿದೆ ಎಂದಿದ್ದಾರೆ.

ಬೆಂಗಳೂರಿನ ಮಲ್ಲೇಶ್ವರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಣಕಾಸು ನಿರ್ವಹಣೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯರವರ ಸುತ್ತ ಅಷ್ಟೊಂದು ತಜ್ಞ ಅಧಿಕಾರಿಗಳು ಇದ್ದರೂ ವಿದೇಶಿ ಕನ್ಸಲ್ಟೆನ್ಸಿ ಆಯ್ಕೆ ಅಗತ್ಯವಿರಲಿಲ್ಲ. 1 ವರ್ಷದಿಂದ ರಾಜ್ಯಕ್ಕೆ ಯಾವುದೇ ಹೂಡಿಕೆ ಬಂದಿಲ್ಲ. ಅಭಿವೃದ್ಧಿಯೂ ಆಗಿಲ್ಲ, ಸಿದ್ದರಾಮಯ್ಯ ನಾಯಕತ್ವದಲ್ಲಿ ಕರ್ನಾಟಕ ಬಳಲುತ್ತಿದೆ ಎಂದು ಟೀಕಿಸಿದರು.

ಎಸ್.ಎಂ. ಕೃಷ್ಣ, ಯಡಿಯೂರಪ್ಪ ಇವರೆಲ್ಲ ಮುಖ್ಯಮಂತ್ರಿಯಾಗಿದ್ದಾಗ ಯಾವುದೇ **-3ನೇ ಪುಟಕ್ಕೆ**

## ಪವಿತ್ರಾ ಕೈವಾಡ ದೃಢ

ಬೆಂಗಳೂರು:-



ಚಿತ್ರದುರ್ಗದ ರೇಣುಕಾಸ್ವಾಮಿ ಕ್ರೂರ ಕೊಲೆ ಪ್ರಕರಣದ ಕಿಂಗ್ ಪಿನ್ ನಟಿ ಪವಿತ್ರಾಗೌಡ ಎನ್ನುವುದು ಪೊಲೀಸರ ತನಿಖೆಯಲ್ಲಿ ಪತ್ತೆಯಾಗಿದೆ.

ಪ್ರಕರಣದ ಮೊದಲ ಆರೋಪಿಯಾಗಿರುವ ಪವಿತ್ರಾಗೌಡಗೆ ನ್ಯಾಯಾಂಗ ಬಂಧನದಲ್ಲಿದ್ದು ಜೈಲಿಗೆ ಸೇರಿರುವ ಬೆನ್ನಲ್ಲೇ ಆಕೆಯೇ ಕೃತ್ಯಕ್ಕೆ ಪ್ರಮುಖ ಕಾರಣ ಎಂಬುದನ್ನು ಪೊಲೀಸರು ಹೊಸ ರಿಮ್ಯಾಂಡ್ ಕಾಪಿಯಲ್ಲಿ ಉಲ್ಲೇಖಿಸಿದ್ದಾರೆ. ಪ್ರಕರಣದ ಎ1, ಎ3 ರಿಂದ ಎ7, ಎ11, ಎ12, ಎ13, ಹಾಗೂ ಎ16 ಆರೋಪಿಗಳು ಕೊಲೆಯಂತ ಒಂದು ಗಂಭೀರ ಪ್ರಕರಣದಲ್ಲಿ ನೇರವಾಗಿ ಭಾಗಿಯಾಗಿ ಕೃತ್ಯ ಎಸಗಿದ್ದು, ಇವರಿಗೆ ಕಾನೂನಿನ ಮೇಲೆ ಕಿಂಚಿತ್ ಗೌರವ ಇಲ್ಲದೇ ಇರುವುದು ಸಾಕ್ಷ್ಯಾಧಾರಗಳಿಂದ ದೃಢಪಟ್ಟಿದೆ. ಎ1 ಆರೋಪಿಯೇ ಕೃತ್ಯಕ್ಕೆ ಪ್ರಮುಖ ಕಾರಣ ಕರ್ತೆಯಾಗಿದ್ದು ಈಕೆಯು ಪ್ರಚೋದನೆ ನೀಡಿ ಇತರೆ ಆರೋಪಿಗಳೊಂದಿಗೆ ಸೇರಿ **-3ನೇ ಪುಟಕ್ಕೆ**

## ರೈಲ್ವೆ ಯೋಜನೆಗಳ ಅನುಷ್ಠಾನಕ್ಕೆ ಕ್ರಮ: ಸೋಮಣ್ಣ

ತುಮಕೂರು:-

ಕಳೆದ 25-30 ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ರೈಲ್ವೆ ಯೋಜನೆಗಳನ್ನು ಅನುಷ್ಠಾನಗೊಳಿಸಿ ಲೋಕಾರ್ಪಣೆ ಮಾಡಲು ಶಕ್ತಿ ಮೀರಿ ಪ್ರಯತ್ನಿಸುವುದಾಗಿ ಕೇಂದ್ರದ ಜಲಶಕ್ತಿ ಹಾಗೂ ರೈಲ್ವೆ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ಇಂದಿಲ್ಲಿ ತಿಳಿಸಿದರು.

ನಮ್ಮ ಅವಧಿಯಲ್ಲಿ ತುಮಕೂರು ಮಾತ್ರವಲ್ಲ, ರಾಜ್ಯದಾದ್ಯಂತ ನೆನೆಗುದಿಯಲ್ಲಿರುವ ರೈಲ್ವೆ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುವುದು. ಎಲ್ಲೆಲ್ಲಿ ಏನೇನು ಆಗಿದೆ ಎನ್ನುವುದನ್ನು



ಪರಿಶೀಲನೆ ನಡೆಸಿದ್ದೇನೆ. ಈ ಬಗ್ಗೆ ಈಗಾಗಲೇ ರೈಲ್ವೆ ಸಚಿವರ ಗಮನಕ್ಕೂ ತಂದಿರುವುದಾಗಿ ಅವರು ಹೇಳಿದರು.

ನಗರದ ಡಿಎಆರ್ ಮೈದಾನದಲ್ಲಿ ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ **-3ನೇ ಪುಟಕ್ಕೆ**

## ಕೇಜ್ರಿ ಜಾಮೀನಿಗೆ ತಡೆ

ನವದೆಹಲಿ:-



ದೆಹಲಿ ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂದಿಸಿದಂತೆ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ಜಾಮೀನು ಸಿಕ್ಕಿ ಸಂಜೆ ವೇಳೆಗೆ ಹೊರ ಬರಬೇಕು ಎನ್ನುವ ಸಂದರ್ಭದಲ್ಲಿ ಮತ್ತೊಂದು ಸಂಕಷ್ಟ ಎದುರಾಗಿದೆ. ಜಾರಿ ನಿರ್ದೇಶನಾಲಯದ ವಾದ ಆಲಿಸುವವರೆಗೆ ಅರವಿಂದ್ ಕೇಜ್ರಿವಾಲ್ ಅವರಿಗೆ ನ್ಯಾಯಾಲಯ ನೀಡಿದ್ದ ಜಾಮೀನು ಆದೇಶಕ್ಕೆ ದೆಹಲಿ ಹೈಕೋರ್ಟ್ ತಡೆ ನೀಡಿದ್ದು ಅರವಿಂದ್ ಕೇಜ್ರಿವಾಲ್ ಅವರಿಗೆ ಜೈಲೆ ಗಟ್ಟಿಯಾಗಿದೆ. ಜಾರಿ ನಿರ್ದೇಶನಾಲಯದ ಅರ್ಜಿ ತುರ್ತು ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಸುಧೀರ್ ಕುಮಾರ್ ಜೈನ್ ಮತ್ತು ರವೀಂದರ್ ದುಡೇಜಾ ಅವರ ಪೀಠ ಜಾಮೀನು ಆದೇಶಕ್ಕೆ ತಡೆ ನೀಡಿದೆ. **-3ನೇ ಪುಟಕ್ಕೆ**

# ಸಕಾಲದಲ್ಲಿ ಸೇವೆ ಒದಗಿಸಿ, ತಾಯಿ-ಶಿಶು ಮರಣ ತಡೆಗಟ್ಟಿ: ಜಿಲ್ಲಾಧಿಕಾರಿ

ಬಳ್ಳಾರಿ:-

ತಾಯಿ ಮರಣ ಹಾಗೂ ಶಿಶುವಿನ ಮರಣವನ್ನು ತಡೆಗಟ್ಟಲು ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಯವರು ಸಮಯಕ್ಕೆ ಸರಿಯಾಗಿ ಸ್ಪಂದಿಸಿ ಸೂಕ್ತ ಚಿಕಿತ್ಸೆ ನೀಡಲು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆ ಇವರ ಸಹಯೋಗದೊಂದಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳ ತಜ್ಞ ವೈದ್ಯರು, ವೈದ್ಯಾಧಿಕಾರಿಗಳು, ಅಧಿಕಾರಿಗಳು, ಸಿಬ್ಬಂದಿಯವರೊಂದಿಗೆ ತಾಯಿ ಮರಣ ಮತ್ತು ಶಿಶುಮರಣ ಕುರಿತು ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಗರ್ಭಿಣಿ, ಬಾಣಂತಿಯರು ಮತ್ತು ಶಿಶು ಮರಣವನ್ನು ಶೂನ್ಯಕ್ಕೆ ತರಲು ಸೂಕ್ತ ಮುಂಜಾಗ್ರತೆಯೊಂದಿಗೆ ಕ್ರಮವಹಿಸಿ, ಅಗತ್ಯವಿದ್ದಲ್ಲಿ ಮಾತ್ರ ಮೇಲ್ಮಟ್ಟದ ಆಸ್ಪತ್ರೆಗೆ ಮುಂಚಿತವಾಗಿ ಮಾಹಿತಿ ನೀಡಿ ಆಂಬ್ಯುಲೆನೊಂದಿಗೆ ಕಳುಹಿಸಬೇಕು ಎಂದು ತಿಳಿಸಿದರು.



ಮನೆಯಲ್ಲಿ ಹೆರಿಗೆ ಮಾಡಿಸುವುದರಿಂದ ತಾಯಿ ಮಗುವಿಗೆ ಉಂಟಾಗುವ ತೊಂದರೆಗಳ ಬಗ್ಗೆ ಮಾಹಿತಿ ನೀಡಿ ಅರಿವುಮೂಡಿಸಬೇಕು. ಗಂಭೀರ ಸಮಸ್ಯೆಗಳು ಇದ್ದಾಗ ಪಾಲಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮನವರಿಕೆ ಮಾಡಿಕೊಡಬೇಕು ಎಂದರು. ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸಲು ಇರುವ ವೈದ್ಯಕೀಯ ಸೌಲಭ್ಯಗಳ ಬಗ್ಗೆ ಕ್ಷೇತ್ರ ಮಟ್ಟದಲ್ಲಿ ಜಾಗೃತಿ ನೀಡುವಂತೆ ಸೂಚಿಸಿದರು.

ಗರ್ಭಿಣಿ ಎಂದು ತಿಳಿದ ದಿನದಿಂದಲೇ ಗರ್ಭಿಣಿಗೆ ಕಂಡು ಬರಬಹುದಾದ ಸಾಮಾನ್ಯ, ಗಂಭೀರ ಸಮಸ್ಯೆಗಳ ಕುರಿತು ಮುತುವರ್ಜಿ ವಹಿಸಲು ಕ್ಷೇತ್ರ ಮಟ್ಟದ ಸಿಬ್ಬಂದಿಯವರು ಗರ್ಭಿಣಿ ಹಾಗೂ ಸಂಬಂಧಿಸಿದ ಪಾಲಕರೊಂದಿಗೆ ಸಮನ್ವಯ ಮಾಡಿಕೊಂಡು ಸೂಕ್ತ ಸಲಹೆ, ಉಪಚಾರ ನೀಡುವ ಕಾರ್ಯ ಆಗಬೇಕು ಎಂದು ಹೇಳಿದರು

ಕಬ್ಬಿಣಾಂಶ ಮಾತ್ರೆಗಳನ್ನು ನುಂಗಿಸುವ ಮೂಲಕ ರಕ್ತ ಹೀನತೆ ತಡೆಯಲು ಮತ್ತು ನಿಗದಿತವಾಗಿ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಹೆಚ್.ಐ.ವಿ ಹೆಚ್‌ಬಿಸಿಜಿ ಪರೀಕ್ಷೆಯನ್ನು ಕೈಗೊಳ್ಳುವ ಮೂಲಕ, ಸ್ಕ್ಯಾನಿಂಗ್ ಅವಶ್ಯವಿರುವಾಗ ವೈದ್ಯರ ಸಲಹೆಯಂತೆ ಮಾಡಿಸಿ ಮಗುವಿನ ಆರೋಗ್ಯದಲ್ಲಿ ಸಂಭಾವ್ಯ ನ್ಯೂನ್ಯತೆಗಳನ್ನು ಪೂರ್ವದಲ್ಲಿಯೇ ಗುರುತಿಸಿ ತಾಯಿ ಮತ್ತು ಶಿಶುವಿನ ಆರೋಗ್ಯದ ದೃಷ್ಟಿಯಲ್ಲಿ ಗಂಭೀರವಾಗಿ ಪರಿಗಣಿಸಿ ಕಾರ್ಯ ನಿರ್ವಹಿಸಲು ಸೂಚಿಸಿದರು.

ಆಸ್ಪತ್ರೆಯಲ್ಲಿ ಹೆರಿಗೆಯಾದಲ್ಲಿ ಸಹಜ ಹೆರಿಗೆ 48 ಗಂಟೆಗಳ ಕಾಲ, ಸಿಜರಿಯನ್ ಹೆರಿಗೆ ಐದು ದಿನಗಳ ಕಾಲ ಕಡ್ಡಾಯವಾಗಿ ದಾಖಲು ಮಾಡಿಕೊಂಡು ನಿರಂತರವಾಗಿ ತಾಯಿಯ ಆರೋಗ್ಯದ ಕುರಿತು ಪರಿಶೀಲಿಸಿ ವೈದ್ಯರು ಮತ್ತು ಸಿಬ್ಬಂದಿಯವರು ಯಾವುದೇ ಲೋಪವಿಲ್ಲದಂತೆ ಕರ್ತವ್ಯ ನಿರ್ವಹಿಸಲು ತಿಳಿಸಿದರು.


ಸರಕಾರದ ಯೋಜನೆಯಾದ ಜನನಿ ಶಿಶು ಸುರಕ್ಷಾ ಕಾರ್ಯಕ್ರಮ ಯೋಜನೆಯಡಿಯಲ್ಲಿ ದೊರಕುವ ಉಚಿತ ಊಟ, ಔಷಧಿ, ಉಚಿತ ರಕ್ತ,ಪರೀಕ್ಷೆ, ಉಚಿತ ನಗುಮಗು ವಾಹನ ಮೂಲಕ ಮನೆಗೆ ಬಿಡುವ ಕುರಿತು ಹಾಗೂ ಜನನಿ ಸುರಕ್ಷಾ ಯೋಜನೆಯಡಿ ಸಹಾಯಧನವನ್ನು ಅವರ ಖಾತೆಗೆ ಜಮಾವಾಗಿರುವ ಬಗ್ಗೆ ನಿಗಾ ವಹಿಸಲು ತಿಳಿಸಿದರು.

ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ತಾಯಿ ಶಿಶುವಿನ ಮರಣವನ್ನು ಶೂನ್ಯಕ್ಕೆ ತರಲು ಕ್ರಮವಹಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕಣುರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ವೈ.ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸಾರೆಡ್ಡಿ, ವಿಮ್ಸ್ ಮಕ್ಕಳ ವಿಭಾಗದ ವೈದ್ಯ ಡಾ.ವಿಶ್ವನಾಥ, ಪ್ರಸೂತಿ ವಿಭಾಗದ ವೈದ್ಯ ಡಾ.ವಿರೇಂದ್ರಕುಮಾರ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಸೇರಿದಂತೆ ಜಿಲ್ಲಾ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಅಧಿಕಾರಿಗಳು, ತಜ್ಞವೈದ್ಯರು, ವೈದ್ಯಾಧಿಕಾರಿಗಳು, ಸಿಬ್ಬಂದಿಯವರು ಉಪಸ್ಥಿತರಿದ್ದರು.




## ಬಿಕ್ಕಳಿಕೆಗೆ ಮನೆಮದ್ದು



1. ಎಲಚಿ ಹಣ್ಣಿನ ಬೀಜದೊಳಗಿನ ಪೊಪ್ಪನ್ನು ಹಿಪ್ಪಲಿಯೊಡನೆ ಸೇರಿಸಿ ನುಣ್ಣನೆ ಪುಡಿ ಮಾಡಿ ಜೇನುತುಪ್ಪದ ಜೊತೆ ಸೇರಿಸಿ ಸೇವಿಸಿದರೆ ಬಿಕ್ಕಳಿಕೆ ನಿಲ್ಲುತ್ತದೆ.
2.ಬಾಳೆಗಿಡದ ಎಲೆಯನ್ನು ಸುಟ್ಟು ಭಸ್ಮ ಮಾಡಿ ಜೇನುತುಪ್ಪದ ಜೊತೆ ಸೇರಿಸಿ ಸೇವಿಸಿದರೆ ಬಿಕ್ಕಳಿಕೆ ಕಡಿಮೆಯಾಗುತ್ತದೆ.
3.ಎಳನೀರಿಗೆ ನಿಂಬೆರಸ ಹಿಂಡಿ ಕುಡಿದರೆ ಬಿಕ್ಕಳಿಕೆ ಕಡಿಮೆಯಾಗುತ್ತದೆ.
4.ಕೆಂಪು ಅಕ್ಕಿಯ ಗಂಜಿ ಮಾಡಿ ಅದಕ್ಕೆ ಶುದ್ಧ ತುಪ್ಪ ಬೆರಸಿ ತಿನ್ನುವುದರಿಂದ ಬಿಕ್ಕಳಿಕೆ ಹತೋಟಿಗೆ ಬರುತ್ತದೆ.
5.ನವಿಲು ಗರಿಯನ್ನು ಸುಟ್ಟು ಭಸ್ಮ ಮಾಡಿ ಆ ಬೂದಿಯನ್ನು ಜೇನುತುಪ್ಪದ ಜೊತೆ ಸೇರಿಸಿ ಸೇವಿಸಿ.
6.ಹಿಪ್ಪಳಿ ಪುಡಿಯನ್ನು ಜೇನುತುಪ್ಪದ ಜೊತೆ ಸೇವಿಸಿದರೆ ಬಿಕ್ಕಳಿಕೆ ಕಡಿಮೆಯಾಗುತ್ತದೆ.
7.ಏಲಕ್ಕಿ ಸಿಪ್ಪೆಯನ್ನು ಕುದಿಸಿ ಕಷಾಯ ಮಾಡಿ ಸೇವಿಸುವುದರಿಂದ ಬಿಕ್ಕಳಿಕೆ ನಿಲ್ಲುತ್ತದೆ.
8.ಒಂದು ಲೋಟ ನೀರನ್ನು ಸ್ವಲ್ಪ ಸ್ವಲ್ಪ ಗುಟುಕು ಗುಟುಕಾಗಿ ಕುಡಿಯುವುದರಿಂದ ಬಿಕ್ಕಳಿಕೆ ಹತೋಟಿಗೆ ಬರುತ್ತದೆ.
9.ತುಳಸಿ ರಸವನ್ನು ಮೂಗಿನ ಹೊಳ್ಳೆಗಳಿಗೆ ಹಾಕುವುದರಿದ ಬಿಕ್ಕಳಿಕೆ ನಿಲ್ಲುತ್ತದೆ.
10.ಕಲ್ಲುಸಕ್ಕರೆಯನ್ನು ಬಾಯಲ್ಲಿ ಹಾಕಿ ಚಪ್ಪರಿಸುವುದರಿಂದ ಬಿಕ್ಕಳಿಕೆ ಕಡಿಮೆಯಾಗುತ್ತದೆ.

1. ಗೌರಮ್ಮನ ಆರೋಗ್ಯ ಸೂತ್ರಗಳು ಪ್ರಿಸ್ಮ್ ಬುಕ್ಸ್ ಪ್ರೈವೇಟ್ ಲಿಮಿಟೆಡ್ ವತಿಯಿಂದ ಪ್ರಕಟಣೆ
2. ಡಾ. ಗೌರಿ ಸುಬ್ರಮಣ್ಯ ಆಯುರ್ವೇದ ತಜ್ಞರು ಮತ್ತು ಧರ್ಮದರ್ಶಿಗಳು ಮುಕ್ತಿನಾಗ ದೇವಸ್ಥಾನ ಫೋನ್ ನಂ. 9535383921

# ಕೂಡ್ಲಿಗಿ ಪೊಲೀಸರ ಕಾರ್ಯಾಚರಣೆ ಮೂವರ ಬಂಧನ, 78ಗ್ರಾಂ ಚಿನ್ನಾಭರಣ ವಶ




ಕೂಡ್ಲಿಗಿ:-

ಪಟ್ಟಣದಲ್ಲಿ ಜ.14ರಂದು ನಡೆದಿದ್ದ ಎರಡು ಮನೆಗಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆನ್ನತ್ತಿದ ಕೂಡ್ಲಿಗಿ ಪೊಲೀಸರು ಮೂವರು ಆರೋಪಿಗಳನ್ನು ಬಂಧಿಸಿ, ಅವರಿಂದ 78 ಗ್ರಾಂ ಚಿನ್ನಾಭರಣ ಹಾಗೂ ಒಂದು ಬೈಕ್ ವಶಪಡಿಸಿಕೊಳ್ಳಲಾಗಿದೆ. ಈ ಮನೆಗಳ್ಳತನ ಪ್ರಕರಣದ ಜಾಲವನ್ನು ಬೇಧಿಸಿರುವ ಕುರಿತು ಕೂಡ್ಲಿಗಿ ಡಿವೈಎಸ್ಪಿ ಮಲ್ಲೇಶಪ್ಪ ಮಲ್ಲಾಪುರ ಅವರು ಬುಧವಾರ ಡಿವೈಎಸ್ಪಿ ಕಚೇರಿಯಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಪಟ್ಟಣದ ಬಾಪೂಜಿ ನಗರದ ಕೆ.ತಿಪ್ಪೇರುದ್ರಪ್ಪ ಮತ್ತು ಡಿ.ಹನುಮಂತಪ್ಪ ಅವರ ಮನೆಗಳಲ್ಲಿ ಕಳ್ಳತನ ನಡೆದ ಪ್ರಕರಣದ ತನಿಖೆಯನ್ನು ಪೊಲೀಸರ ತಂಡ ಕ್ಷಿಪ್ರ ಕಾರ್ಯಾಚರಣೆ ನಡೆಸುವ ಮೂಲಕ ಆರೋಪಿಗಳಾದ ಸಂಡೂರು ತಾಲೂಕಿನ ಬೊಮ್ಮಘಟ್ಟ ಗ್ರಾಮದ ಅಜ್ಜಯ್ಯ, ಮಲ್ಲಿಕಾರ್ಜುನ ಮತ್ತು ಕಾನೂನು ಸಂಘರ್ಷಕ್ಕೊಳಗಾದ ಬಾಲಕ ಬಾಲಾಪರಾಧಿಯನ್ನು ವಶಕ್ಕೆ ಪಡೆಯಲಾಗಿದ್ದು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಉಳಿದಂತೆ ಇನ್ನಷ್ಟು ಮನೆಗಳ್ಳತನದ ಪ್ರಕರಣ ಬೆನ್ನತ್ತಿ ವಿಜಯನಗರ ಜಿಲ್ಲಾ ಅಧೀಕ್ಷಕರ ಮಾರ್ಗದರ್ಶನದಲ್ಲಿ ಮುಂದಿನ ದಿನಗಳಲ್ಲಿ ಇನ್ನಷ್ಟು ಪ್ರಕರಣಗಳನ್ನು ಪತ್ತೆಹಚ್ಚಲಾಗುವುದು ಎಂದು ತಿಳಿಸಿದರು.

ವಿಜಯನಗರ ಜಿಲ್ಲೆಯ ಪೊಲೀಸ್ ಜಿಲ್ಲಾ ಅಧೀಕ್ಷಕರಾದ ಹರಿಬಾಬು ಮಾರ್ಗ ದರ್ಶನದಲ್ಲಿ ಕೂಡ್ಲಿಗಿ ಡಿವೈಎಸ್ ಪಿ ಮಲ್ಲೇಶಪ್ಪ ಮಲ್ಲಾಪುರ ನೇತೃತ್ವದ ಪತ್ತೆ ಕಾರ್ಯ ತಂಡದಲ್ಲಿ ಕೂಡ್ಲಿಗಿ ಸಿಪಿಐ ಸುರೇಶ್ ತಳವಾರ, ಕೂಡ್ಲಿಗಿ ಪಿಎಸ್ಐ ಧನುಂಜಯ, ಗುಡೇಕೋಟೆ ಪಿಎಸ್ಐ ಸಿ.ಪ್ರಕಾಶ್, ಮುಖ್ಯ ಪೇದೆಗಳಾದ ಹೊಸಹಟ್ಟಿ ಅಂಜಿನಪ್ಪ, ಚಂದ್ರಶೇಖರ ಗೌಡ, ಎಎಚ್‌ಸಿ ಶಿವಕುಮಾರ, ಪೇದೆಗಳಾದ ಓಬಳಾಪುರ ತಿಪ್ಪೇಸ್ವಾಮಿ, ಕೂಡ್ಲಿಗಿ ರಾಘವೇಂದ್ರ, ಮಂಜುನಾಥ, ರೇವಣಾರಾಧ್ಯ, ಸೂಲದಹಳ್ಳಿ ಹಂಪಣ್ಣ, ಪೂಜಾರಹಳ್ಳಿ ಗುರುಸ್ವಾಮಿ, ಬಸವರಾಜ, ಮಂಜುನಾಥ, ಹುಡೇಂ ನಾಗೇಶ್ ಇತರರಿದ್ದು ಮನೆಗಳ್ಳರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ತಿಳಿದಿದೆ. ಹಾಗೂ ಕೂಡ್ಲಿಗಿ ಪೊಲೀಸರ ಕಾರ್ಯಾಚರಣೆಗೆ ವಿಜಯನಗರ ಎಸ್ಪಿ ಹರಿಬಾಬು ಪ್ರಶಂಸೆ ವ್ಯಕ್ತಪಡಿಸಿ ಶ್ಲಾಘಿಸಿದ್ದಾರೆ.

# ಸರಕಾರ ಕುದುರೆ ಮುಖ ಕಂಪನಿಗೆ ಗಣಿಗೆ ಪರವಾನಿಗೆ ನೀಡಿರುವುದು ಯಾವ ನ್ಯಾಯ?

ಸಂಡೂರು:-

ಗ್ರಾಮದ 4 ದಿಕ್ಕುಗಳಲ್ಲಿ ಈಗಾಗಲೇ ಗಣಿ ಗಾರಿಕೆ ನಡೆಯುತ್ತಿದೆ. ಪಶ್ಚಿಮ ದಿಕ್ಕಿನಲ್ಲಿ ದೇವದಾರಿ ಬಿಟ್ಟು ದೇವದಾರಿ ಬೆಟ್ಟ ಮಾತ್ರ ಉಳಿದಿದೆ.

ಅರಣ್ಯ ನಾಶದಿಂದ ಕಳೆದ ಬೇಸಿಗೆಯಲ್ಲಿ ದಾಖಲೆ ತಾಪಮಾನ ಅನುಭವಿಸಿದ್ದೇವೆ.

ಇದೀಗ ಮತ್ತೆ ದೇವದಾರಿ ಗಣಿಯನ್ನು ಸರ್ಕಾರ ಕುದುರೆಮುಖ ಕಂಪನಿಗೆ ನಿಡರುವುದು ಯಾವ ನ್ಯಾಯ ? ಅರಣ್ಯದಲ್ಲಿ ಗಣಿಗಾರಿಕೆ ನಡೆದರೆ.

ಕಾಡು ಪ್ರಾಣಿಗಳು ಊರಿಗೆ ಮತ್ತು ರೈತರ ಜಮೀನುಗಳಿಗೆ ನುಗ್ಗಿ ಮಾನವ ಕಾಡುವ ಪ್ರಾಣಿ ಸಂಘರ್ಷಕ್ಕೆ ಕಾರಣವಾಗುವುದಿಲ್ಲವೇ ? ಎಂದು ರೈತ ಮುಖಂಡ ಜಿ.ಕೆ. ನಾಗರಾಜರವರ ಪ್ರಶ್ನೆ.

ರಾಜ್ಯ ರೈತ ಸಂಘದಿಂದ ನರಸಿಂಗಾಪುರ ಗ್ರಾ.ಪಂ. ಮನವಿ ಸಲ್ಲಿಸಿ ಕುದುರೆಮುಖ ಕಂಪನಿಗೆ ದೇವದಾರಿ ಗಣಿ ಆರಂಭಿಸಲು ಗ್ರಾಮ ಪಂಚಾಯತಿಯಿಂದ ನಿರಾಪೇಕ್ಷಣಾ ಪತ್ರ ನೀಡಬಾರದು.

ಜೊತೆಗೆ ಮುಂದಿನ ಗ್ರಾಮ ಸಭೆಯಲ್ಲೂ ಈ ಕುರಿತು ಚರ್ಚೆ ನಡೆಸಿ ಪರವಾನಿಗೆ ನೀಡಬಾರದು ಎಂದು ಮನವಿ ಮಾಡಿದರು.

ಈ ಭಾಗದ ರೈತರು ತೆಂಗು, ಅಡಿಕೆ, ಮಹಾಗನಿ, ತೇಗ, ಮುಂತಾದ ಬಹುವಾರ್ಷಿಕ ಬಳೆಗಳನ್ನು ಬೆಳೆಯುತ್ತಿದ್ದಾರೆ. ಗಣಿಗಾರಿಕೆ ಚಟುವಟಿಕೆಗಳು ಹೆಚ್ಚಾದರೆ, ರೈತರ ಬಹುವಾರ್ಷಿಕ ಬಳೆಗಳಿಗೂ ಉಳಿಗಾಲವಿರುವುದಿಲ್ಲ.

ಈಗಾಗಲೇ ಗ್ರಾ.ಪಂ. ವ್ಯಾಪ್ತಿಯಲ್ಲಿ ಆರ್.ಐ.ಪಿ.ಎಲ್. ಕಾರ್ಖಾನೆಗೆ ಸ್ಥಳೀಯರು ಅಪೇಕ್ಷಣೆ ಸಲ್ಲಿಸಿದ್ದರೂ, ಕಾರ್ಖಾನೆ



ಸ್ಥಾಪನೆಗೊಂಡು ಜನ ಜಾನುವಾರುಗಳಿಗೆ ಹಾನಿ ಉಂಟಾಗುತ್ತಿದೆ ಎಂದು ತಿಳಿಸಿದರು.

ಕುದುರೆಮುಖ ಕಂಪನಿಗೆ ಅರಣ್ಯ ಇಲಾಖೆ ಪರವಾನಿಗೆ ನೀಡುವುದಿಲ್ಲದೇ ಸುಮಾರು 99 ಸಾವಿರ ಮರಗಳು ಕಟಾವು ವಿಷಯವನ್ನು ಮುಚ್ಚಿಟ್ಟಿದೆ.

ಕುದುರೆಮುಖ ಕಂಪನಿಗೆ ಸಿ-ಕ್ಯಾಟಗ-ರಿಯ ಗಣಿ ಪರವಾನಿಗೆ ನೀಡಬಹುದಾಗಿತ್ತು. ಬದಲಿಗೆ ಹೊಸ ಗಣಿಯನ್ನು ನೀಡಲು ನಮ್ಮ ಮತ್ತು ಸಾರ್ವಜನಿಕರ ತಕರಾರು ಇದೆ. ಸ್ಥಳೀಯ ನಿವಾಸಿಗಳ ಹಿತದೃಷ್ಟಿಯಿಂದ ಹಾಗೂ ಅರಣ್ಯ ನಾಶ ಮಾಡದಂತೆ ತಡೆ-ಯಲಿ ಕಂಪನಿಗೆ ಪರವಾನಿಗೆ ನೀಡಬಾರದು. ಯವುದೇ ಕಾರಣಕ್ಕೂ ಬೆಟ್ಟದಲ್ಲಿ ಗಣಿಗಾರಿಕೆ ನಡೆಯಬಾರದು ಎಂದು ರೈತ ಮುಖಂಡ ಜಿ.ಕೆ. ನಾಗರಾಜರವರು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಮೌನೇಶ, ರೈತ ಗ್ರಾಮ ಘಟಕದ ಅಧ್ಯಕ್ಷ, ನೀಲಕಂಟಪ್ಪ, ರಮೇಶ್ ಕುಮಾರ ಕಾರ್ಯಧರ್ಶಿ, ಹುಲುಗಪ್ಪ, ಎಂ. ಮಂಜುನಾಥ, ಆಗಲೂರು ಗಂಗಣ್ಣ, ಉಪಸ್ಥಿತರಿದ್ದರು.

# ಆರ್‌ಎಂಎಸ್ ಭವನದ ಎದುರು ನೌಕರರ "ಧರಣಾ" ಕಾರ್ಯಕ್ರಮ

ಬೆಂಗಳೂರು:-



ಭಾರತೀಯ ಅಂಚೆ ಇಲಾಖೆಯ PMG HQ ನಲ್ಲಿ SSRM ನೊಂದಿಗೆ AIRMS ªÀÄvÀÄÛ MMS EU Gr-C Aಯೂನಿಯನ್‌ಗಳ ಸಂಯೋಜಿತ ವಿಭಾಗೀಯ/ವೃತ್ತದ ಪ್ರತಿನಿಧಿಗಳು ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ದಿನಾಂಕ್:21-06-2024,ರಂದು ಆರ್‌ಎಂಎಸ್ ಭವನದ ಎದುರು "ಧರಣಿ" ಕಾರ್ಯಕ್ರಮವನ್ನು ನಿಯಮಿತ ಕೆಲಸಕ್ಕೆ ಅಡ್ಡಿಯಾಗದಂತೆ ನಡೆಸಲಾಯಿತು. ಆದ್ದರಿಂದ ವಿಶೇಷ ಸಭೆಯನ್ನು ಕರೆಯುವ ಮೂಲಕ ಈ ಕೆಳಗಿನ ಸಮಸ್ಯೆಗಳನ್ನು ಚಾಲ್ತಿಯಲ್ಲಿರುವ ಸಮಸ್ಯೆಗಳನ್ನು ಗಂಭೀರವಾಗಿ ಚರ್ಚಿಸಲಾಗಿದೆ.ಆದರೂ ಇದುವರೆಗೆ ಆಡಳಿತಾತ್ಮಕ ಕಡೆಯಿಂದ ಯಾವುದೇ ಸಕಾರಾತ್ಮಕ ಪ್ರತಿಕ್ರಿಯೆ ಇಲ್ಲದಿರುವುದರಿಂದ ಕೂಡಲೆ ಈ ಬೇಡಿಕೆಗಳು

1. ಯೂನಿಯನ್ ಪ್ರತಿನಿಧಿಗಳೊಂದಿಗೆ ನಿಯಮಿತವಾಗಿ ಮಾಸಿಕ ಸಭೆ ನಡೆಸುವುದು.
2.ಪ್ರತಿ ಘಟಕದಲ್ಲಿ MTS/OS ಸಿಬ್ಬಂದಿ ಕೊರತೆಯ ಸಮಸ್ಯೆಯನ್ನು ಪರಿಹರಿಸಿ
3. ಊಟದ ಕೋಣೆಯನ್ನು ಒದಗಿಸಬಹುದು
4. CCRC & NSH ಸಿಬ್ಬಂದಿಗೆ ಹಗಲು ಮತ್ತು ರಾತ್ರಿ
5. ರಿಕ್ರಿಯೇಶನ್ ಕ್ಲಬ್ ಅನ್ನು ಒದಗಿಸಿ. ಟಿಯೊಲೆಟ್‌ಗಳ ನವೀಕರಣ
6. ಲಾಕರ್‌ಗಳೊಂದಿಗೆ ಜೆಂಟ್ಸ್ ಎಂಟಿಎಸ್‌ಗೆ ಡ್ರೆಸ್ಸಿಂಗ್ ಕೊಠಡಿಯನ್ನು ಒದಗಿಸಿ
7. ನೆಟ್‌ವರ್ಕ್‌ನ ಸಮಸ್ಯೆಗಳನ್ನು ಪರಿಹರಿಸಿ
8. NSH ಆವರಣದ ಮುಂಭಾಗದಲ್ಲಿ ಮುರಿದ ಜಿಂಕ್ ಶೀಟ್‌ಗಳನ್ನು ಬದಲಾಯಿಸಿ/ದುರಸ್ತಿ ಮಾಡಿ.
9. ಎಲ್ಲಾ ಸಿಬ್ಬಂದಿಗೆ ಹೊಸ ಗುರುತಿನ ಚೀಟಿಗಳನ್ನು ಒದಗಿಸಿ.
10. CCRC /NSH
11 ಗೆ ಎಕ್ಸಾಸ್ಟ್ ಫ್ಯಾನ್‌ಗಳನ್ನು ಸ್ಥಾಪಿಸಿ. CCRC ಮತ್ತು NSH BG
12 ನಲ್ಲಿ ಮಹಿಳೆಯರ ವಿಶ್ರಾಂತಿ ಕೊಠಡಿಗಳಲ್ಲಿ ಸಾಕಷ್ಟು ಸ್ಥಳಾವಕಾಶ ಮತ್ತು ಸೌಕರ್ಯಗಳನ್ನು ಒದಗಿಸಿ. ಎಲ್ಲಾ ಅರ್ಹ ಕ್ರೀಡಾ ವ್ಯಕ್ತಿಗಳಿಗೆ ಉಡಿಚಿಟಿಣಖಿಟಜ ಆಫ್.
13. ಎಲ್ಲಾ ಘಟಕಗಳಲ್ಲಿ ಸಾಕಷ್ಟು ಸಿಬ್ಬಂದಿ ಬಲವನ್ನು ಖಚಿತಪಡಿಸಿಕೊಳ್ಳಿ.
14. ಬೆಂಗಳೂರು STG DVN15 ರ ಎಲ್ಲಾ ಘಟಕಗಳಲ್ಲಿ ಹಾನಿಗೊಳಗಾದ ಕುರ್ಚಿಗಳು ಮತ್ತು ಇತರ ಕಚೇರಿ ಪೀಠೋಪಕರಣಗಳನ್ನು ಬದಲಾಯಿಸಿ.

NSH ನ ಮುಂಭಾಗದ ಅಂಗಳದಲ್ಲಿ ಹೆಚ್ಚುವರಿ ಛಾವಣಿಯನ್ನು ಒದಗಿಸಬೇಕು ಕೂಡಲೆ ಈ ಸಮಸ್ಯೆಗಳನ್ನು ಪರಿಹರಿಸಬೇಕೆಂದು ಒತ್ತಾಯಿಸಲಾಯಿತು.

# ಪಿ.ಎಮ್.ಜೆ.ಜೆ.ಬಿ.ವೈ. ಹಾಗೂ ಪಿ.ಎಮ್. ಎಸ್.ಬಿ.ವೈ.ಫಲಾನುಭವಿಗಳಿಗೆ ಚೆಕ್ ವಿತರಣೆ

ಕಲಬುರಗಿ:-

ಭಾರತ ಸರ್ಕಾರದ ವಿವಿಧ ಸಾಮಾಜಿಕ ಭದ್ರತಾ ಯೋಜನೆಯ ಅರಿವು ಮೂಡಿಸುವ ಕಾರ್ಯಕ್ರಮ, 'ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ' (ಕಒಎಎ-ಃಙ), "ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ' (ಕಒಖಃಙ) ಮತ್ತು ಪಿಂಚಣಿ ಯೋಜನೆ "ಅಟಲ್ ಪಿಂಚಣಿ ಯೋಜನೆ (ಂಕಙ) ಕುರಿತು ಜಾಗೃತಿ ಮೂಡಿಸುವ ಕಲಬುರಗಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಂ-ಯಾ ಪ್ರಾದೇಶಿಕ ವ್ಯವಹಾರ ಕಚೇರಿ ಮತ್ತು ಆಳಂದ ತಾಲೂಕಿನ ನಿಂಬಗಾ ಗ್ರಾಮದ ಎಸ್.ಬಿ.ಐ. ಶಾಖೆಯಲ್ಲಿ ಬುಧವಾರ (ಜೂನ್ 19 ರಂದು) ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಕಲಬುರಗಿ ಎಸ್.ಬಿ.ಐ. ಬ್ಯಾಂಕಿನ ಆರ್.ಬಿ.ಓ. ಪ್ರಾದೇಶಿಕ ವ್ಯವಸ್ಥಾಪಕರಾದ ದೇವಕಿ ನಂದನ್ ಖಂಡೇಲ್ವಾಲ್ ಹಾಗೂ ಕಲಬುರಗಿ ಲೀಡ್ ಬ್ಯಾಂಕ್ ಕಚೇರಿಯ ಎಫ್.ಎಲ್.ಸಿ. ರಾದ ಗೋಪಾಲ ಕುಲಕರ್ಣಿ ಅವರು ವಿವಿಧ ಸಾಮಾಜಿಕ ಭದ್ರತಾ ಯೋಜನೆ ಕುರಿತು ಸಾರ್ವಜನಿಕರಿಗೆ ಮತ್ತು ಬ್ಯಾಂಕ್‌ನ ಗ್ರಾಹಕರಿಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ 'ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆಯಡಿಯ ಫಲಾನುಭವಿಯಾದ ಶರಣಬಸಪ್ಪ ಎಸ್. ಅವರಿಗೆ 2,00,000 ರೂ. ಹಾಗೂ




"ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆಯ ಫಲಾನುಭವಿಯಾದ ಹಣಮಂತರಾಯ ಅಂಕಲಗಿ ಅವರಿಗೆ 2,00,000 ರೂ.ಗಳ ವಿಮಾ ಕ್ಲೈಮ್ ಇತ್ಯರ್ಥ ಚೆಕ್ಕನ್ನು ಕಲಬುರಗಿಯ ಎಸ್.ಬಿ.ಐ. ಆರ್.ಬಿ.ಓ.ನ ಪ್ರಾದೇಶಿಕ ವ್ಯವಸ್ಥಾಪಕರಾದ ದೇವಕಿ ನಂದನ್ ಖಂಡೇಲ್ವಾಲ್ ಅವರು ವಿತರಿಸಿದರು.

ಬ್ಯಾಂಕ್‌ನಲ್ಲಿ ಖಾತೆ ಹೊಂದಿರುವ ಎಲ್ಲಾ ಅರ್ಹ ನಾಗರಿಕರು ಸರ್ಕಾರದ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳ ಪ್ರಯೋಜನ ಪಡೆಯಬೇಕೆಂದು ಅವರು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ನಿಂಬರ್ಗಾ ಎಸ್.ಬಿ.ಐ. ಶಾಖೆಯ ಶಾಖಾ ವ್ಯವಸ್ಥಾಪಕ ಮಹೇಶ್ವರ ರೆಡ್ಡಿ, ಕಲಬುರಗಿ ಎಸ್.ಬಿ.ಐ. ಆರ್.ಬಿ.ಓ. ಎಫ್-1 ಮ್ಯಾನೇಜರ್ ಅಮರನಾಥ ಪಿ. ಹಾಗೂ ಕಲಬುರಗಿ ಲೀಡ್ ಬ್ಯಾಂಕ್ ಕಚೇರಿಯ ಎಫ್.ಎಲ್.ಸಿ. ಯವರಾದ ಗೋಪಾಲ ಕುಲಕರ್ಣಿ ಉಪಸ್ಥಿತರಿದ್ದರು.

# ಬೆಲೆ ಏರಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ



ಹರಪನಹಳ್ಳಿ:-

ಪೆಟ್ರೋಲ್ ಮತ್ತು ಡಿಸೆಲ್ ಬೆಲೆ ಏರಿಕೆ ಖಂಡಿಸಿ, ರಾಜ್ಯ ಕಾಂಗ್ರೇಸ್ ಸರ್ಕಾರದ ವಿರುದ್ಧ ತಾಲೂಕು ಬಿಜೆಪಿ ಘಟಕದಿಂದ ಬೃಹತ್ ಪ್ರತಿಭಟನೆ ನಡೆಸಿ, ರಾಜ್ಯ ಸರ್ಕಾರಕ್ಕೆ ತಹಶೀಲ್ದಾರರ ಮೂಲಕ ಮನವಿ ಸಲ್ಲಿಸಿದರು.

ಪಟ್ಟಣದ ಬಸ್‌ನಿಲ್ದಾಣದಿಂದ ಹೊಸಪೇಟೆ ರಸ್ತೆ ಮುಖಾಂತರ ಐ.ಬಿ.ವೃತ್ತದವರೆಗೆ ರಾಜ್ಯ ಸರ್ಕಾರದ ವಿರುದ್ಧ ಘೋಷಣೆಯನ್ನು ಕೂಗಿದರು. ಬಳಿಕ ಐ.ಬಿ.ವೃತ್ತದ ಬಳಿ ಮಾನವ ಸರಪಳಿ ರಚಿಸಿ, ಪ್ರತಿಭಟನೆ ನಡೆಸಿದರು.

ಪೆಟ್ರೋಲ್ ಮತ್ತು ಡಿಸೆಲ್ ಮೇಲಿನ ಶುಲ್ಕವನ್ನು ಹೆಚ್ಚಿಸುವ ಮೂಲಕ ರಾಜ್ಯ ಸರ್ಕಾರ ಬೆಲೆ ಏರಿಕೆಗೆ ಕಾರಣವಾಗಿದೆ. ಇದರಿಂದ ಜನಸಾಮಾನ್ಯರ ಮೇಲೆ ಹೊರೆಯಾಗಲಿದೆ. ಅಗತ್ಯ ವಸ್ತುಗಳು ಸಹ ಬೆಲೆ ಏರಿಕೆಯಾಗಲಿದ್ದು ಎಲ್ಲಾ ವರ್ಗದ ಜನರು ಜೀವನ ನಡೆಸುವುದು ಕಷ್ಟವಾಗಲಿದೆ, ಆದ್ದರಿಂದ ಕೂಡಲೇ ರಾಜ್ಯ ಸರ್ಕಾರ ತಮ್ಮ ಆದೇಶವನ್ನು ಹಿಂಪಡೆಯಬೇಕು ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ತೀವ್ರವಾದ ಪ್ರತಿಭಟನೆ ನಡೆಸುವುದಾಗಿ ಪ್ರತಿಭಟನಾಕಾರರು ಮನವಿಯಲ್ಲಿ ಎಚ್ಚರಿಸಿದ್ದಾರೆ.

ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಜೀವರೆಡ್ಡಿ, ತಾಲೂಕು ಬಿಜೆಪಿ ಅಧ್ಯಕ್ಷ ಕೆ.ಲಕ್ಷ್ಮಣ, ಅರುಂಡಿ ನಾಗರಾಜ, ಮುದುಕವ್ವನವರ ಶಂಕರ, ಉದಯಕುಮಾರ, ಕಣಿವಿಹಳ್ಳಿ ಮಂಜುನಾಥ, ಕುಸುಮಾ ಜಗದೀಶ, ಬಾಗಳಿ ಕೊಟ್ರೇಪ್ಪ, ಓಂಕಾರಗೌಡ, ಮಂಜುನಾಥ ಎನ್, ಚನ್ನನಗೌಡ, ಮಂಜ್ಯನಾಯ್ಕ, ಸುರೇಶ್, ರೇಖಾ, ಮುನೇಗೌಡ, ಗಿರಿಶ್, ಚಾರ್ಯಪ್ಪ, ಸೇರಿದಂತೆ ಇತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ಒಂದನೇ ಪುಟದಿಂದ

# ಪವಿತ್ರಾ ಕೈವಾಡ ದೃಢ

ಸೇರಿ ಕೊಲೆಗೆ ಒಳಚಂಚು ರೂಪಿಸಿರುವುದು ಮತ್ತು ಕೃತ್ಯದಲ್ಲಿ ಭಾಗಿಯಾಗಿರುವುದು ತನಿಖೆಯಲ್ಲಿ ದೃಢಪಟ್ಟಿರುತ್ತದೆ. ಎ2 ಆರೋಪಿಯು ತನ್ನ ಹಣ ಹಾಗೂ ಇತರೆ ಆರೋಪಿಗಳನ್ನು ಒಳಗೊಂಡ ತನ್ನ ಅಭಿಮಾನಿ ಬಳಗವನ್ನು ಬಳಸಿಕೊಂಡು ಕೃತ್ಯದಲ್ಲಿ ಭಾಗಿಯಾಗಿ ಹಾಗೂ ಭಾಗಿಯಾಗಿಸಿ ನೆಲದ ಕಾನೂನನ್ನು ದುರುಪಯೊಗ ಪಡಿಸಿಕೊಂಡಿರುವುದು ಸಾಕ್ಷ್ಯಾಧಾರಗಳಿಂದ ಕಂಡು ಬಂದಿರುತ್ತದೆ.ಎ2 ಆರೋಪಿಯು ತನ್ನ ಹಣಬಲ ಮತ್ತು ಪ್ರಭಾವಿ ಅಭಿಮಾನಿ ಬಳಗವನ್ನು ಬಳಸಿಕೊಂಡು ಅಮಾಯಕ ಮೃತ ರೇಣುಕಾಸ್ವಾಮಿಯನ್ನು ಚಿತ್ರದುರ್ಗದ ಎ4 ಮತ್ತು ಎ6 ರಿಂದ ಎ8 ರ ವರೆಗಿನ ಆರೋಪಿಗಳಿಂದ ಆತನನ್ನು ಅಪಹರಣ ಮಾಡಿಸಿದ್ದಾರೆ.

**ಸಮಾನ ಉದ್ದೇಶ:**

ಮೃತನ ಬಳಿಯಿಂದ ಚಿನ್ನಾಭರಣಗಳನ್ನು ಬಿಚ್ಚಿಸಿಕೊಂಡು ಪಟ್ಟಣಗೆರೆಯ ಎ10 ಆರೋಪಿ ವಿನಯ್ ಸಂಬಂಧಿಯಾದ ಜಯಣ್ಣ ಅವರಿಗೆ ಸೇರಿದ್ದ ಶೆಡ್‌ಗೆ ಕರೆತಂದು ಅಲ್ಲಿ ಎ1 ಆರೋಪಿಯು ಸೇರಿದಂತೆ ಇತರೆ ಆರೋಪಿಗಳೊಂದಿಗೆ ಸಮಾನ ಉದ್ದೇಶದಿಂದ ಎಲ್ಲರೂ ಸೇರಿ ಮೃತನ ಮೇಲೆ ಅಮಾನುಷವಾಗಿ ಮತ್ತು ಮಾರಣಾಂತಿಕ ಹಲ್ಲೆ ಮಾಡಿ ಕೊಲೆ ಮಾಡಿದ್ದಾರೆ. ಇದೆಲ್ಲವೂ ಈವರೆಗಿನ ತನಿಖೆಯಲ್ಲಿ ಸಂಗ್ರಹಿಸಿರುವ ಭೌತಿಕ, ತಾಂತ್ರಿಕ ಹಾಗೂ ವೈಜ್ಞಾನಿಕವಾಗಿ ಸಂಗ್ರಹಿಸಿರುವ ಸಾಕ್ಷ್ಯಾಧಾರಗಳಿಂದ ದೃಢಪಟ್ಟಿರುತ್ತದೆ.

ಆರೋಪಿಗಳು ಕೃತ್ಯದ ನಂತರ ಮತ್ತೆ ಒಳಸಂಚು ರೂಪಿಸಿ ಸಾಕ್ಷ್ಯ ನಾಶ ಪಡಿಸುವ ಉದ್ದೇಶದಿಂದ ಶವವನ್ನು ಸಾಗಿಸಲು ತಮ್ಮ ಹಣದ ಪ್ರಭಾವ ಬಳಸಿ ಕ್ರಿಮಿನಲ್ ಹಿನ್ನೆಲೆಯುಳ್ಳವರಿಗೆ ಹಣದ ಆಮಿಷ ತೋರಿಸಿ ಅವರ ಮೂಲಕ ಶವವನ್ನು ಕೃತ್ಯ ನಡೆದ ಸ್ಥಳದಿಂದ ಬೇರೆ ಕಡೆ ಸಾಗಿಸಿ ಸಾಕ್ಷಿ ನಾಶ ಪಡಿಸಿರುವುದು ತನಿಖೆಯಿಂದ ಕಂಡು ಬಂದಿರುತ್ತದೆ.

**ಕ್ರಿಮಿನಲ್ ಹಿನ್ನಲೆ:**

ಪ್ರಕರಣದ ಎ2, ಎ4, ಎ15, ಎ16 ಆರೋಪಿಗಳು ಕ್ರಿಮಿನಲ್ ಹಿನ್ನೆಲೆಯುಳ್ಳವರಾಗಿರುತ್ತಾರೆ. ಮುಂದುವರೆದು ಆರೋಪಿಗಳು ಮೃತನನ್ನು ಕೊಲೆ ಮಾಡಿ, ನಂತರ ತನ್ನ ಹಣದ ಪ್ರಭಾವದಿಂದ ಬೇರೆ ವ್ಯಕ್ತಿಗಳನ್ನು ಕೊಲೆಯಲ್ಲಿ ಭಾಗಿಯಾಗಿರುವುದಾಗಿ ಬಿಂಬಿಸಿ ಪ್ರಕರಣದಿಂದ ತಾವುಗಳು ನುಣುಚಿಕೊಳ್ಳಲು ಪ್ರಯತ್ನಿಸಿರುವುದು ತನಿಖೆಯಲ್ಲಿ ಕಂಡು ಬಂದಿರುತ್ತದೆ ಎಂದು ಎಂದು ಪೊಲೀಸರು ರಿಮ್ಯಾಂಡ್ ಕಾಪಿಯಲ್ಲಿ ಉಲ್ಲೇಖಿಸಿದ್ದಾರೆ.

**ಸಾಕ್ಷ್ಯಾಧಾರ ಪರಿಶೀಲನೆ:**

ಪ್ರಕರಣದ ತನಿಖಾ ಕಾಲದಲ್ಲಿ ಅಮಾನತ್ತು ಪಡಿಸಿಕೊಂಡು ಪರಿಶೀಲಿಸಲಾದ ತಾಂತ್ರಿಕ ಸಾಕ್ಷ್ಯಾಧಾರಗಳಲ್ಲಿ ಆರೋಪಿಗಳು ನೇರವಾಗಿ ಭಾಗಿಯಾಗಿರುವುದು ಕಂಡು ಬಂದಿದ್ದು ಇನ್ನೂ ಹಲವಾರು ತಾಂತ್ರಿಕ ಮತ್ತು ವೈಜ್ಞಾನಿಕ ಸಾಕ್ಷ್ಯಾಧಾರಗಳನ್ನು ಪರಿಶೀಲನೆಗೆ ಕಳುಹಿಸಿದ್ದು ವರದಿ ಸಂಗ್ರಹಿಸಿ ಹೆಚ್ಚಿನ ತನಿಖೆಯನ್ನು ಕೈಗೊಳ್ಳಬೇಕಾಗಿರುತ್ತದೆ.

ಕೈದಿ ನಂ 6024 ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಪರಪ್ಪನ ಅಗ್ರಹಾರ ಜೈಲು ಸೇರಿರುವ ಪವಿತ್ರಾಗೆ ಡಿ ಬ್ಯಾರಕ್ ಸಿಕ್ಕಿದ್ದು,ಕೈದಿ ನಂಬರ್ 6024 ಸಂಖ್ಯೆಯನ್ನು ನೀಡಲಾಗಿದೆ.

ಪ್ರಕರಣದ ಉಳಿದ ಆರೋಪಿಗಳು ಜೈಲಿನ ಕ್ವಾರೆಂಟೈನ್ ಬ್ಯಾರಕ್‌ನಲ್ಲಿ ಇಡಲಾಗಿದ್ದು, ಎಲ್ಲಾ ಆರೋಪಿಗಳಿಗೆ ವಿಚಾರಣಾಧೀನ ಕೈದಿ ನಂಬರ್ ನೀಡಲಾಗಿದೆ.

ರೇಣುಕಾ ಸ್ವಾಮಿ ಕೊಲೆ ಪ್ರಕರಣದ ಎ1 ಆರೋಪಿ ಪವಿತ್ರಾ ಮಹಿಳಾ ವಿಭಾಗದ ಡಿ ಬ್ಯಾರಕ್ ನಲ್ಲಿ ಸೆರೆವಾಸ ಅನುಭವಿಸುತ್ತಿದ್ದಾರೆ. ಜೈಲಿನಲ್ಲಿ ಸರಿಯಾಗಿ ಊಟ ಮಾಡದೇ, ರಾತ್ರಿ 11ರ ವೇಳೆ ನಿದ್ರೆಗೆ ಜಾರಿ ಸರಿಯಾಗಿ ನಿದ್ದೆ ಮಾಡದೆ ಆಗಾಗ ಎದ್ದು ಕುಳಿತು ಯೋಚನೆ ಮಾಡಿದ್ದಾರೆ. ಇಂದು ಬೆಳಗ್ಗೆ 5 ಗಂಟೆಗೆ ಎದ್ದಿರುವ ಜೈಲಿನ ಬ್ಯಾರಕ್ ಬಳಿ ವಾಕಿಂಗ್ ಮಾಡಿ ಜೈಲಿನ ಸಿಬ್ಬಂದಿ ನೀಡಿದ ಕಾಫಿಯನ್ನು ಪವಿತ್ರಾ ಕುಡಿದು ದಿನಪತ್ರಿಕೆ ಓದಿದ ಅವರಿಗೆ ಜೈಲಿನ ಮೆನುವಿನಂತೆ ತಿಂಡಿಗೆ ಉಪ್ಪಿಟ್ಟು ನೀಡಲಾಗಿದೆ.

ಪರಪ್ಪನ ಅಗ್ರಹಾರ ಜೈಲಿಗೆ ಬಂದ ಪವಿತ್ರಾ ಗೌಡ ಮಗಳು ಮತ್ತು ತಾಯಿ ಸೇರಿದಂತೆ ಕುಟುಂಬದವರು ಆಕೆಯನ್ನು ಭೇಟಿಯಾಗಿದ್ದಾರೆ.

ನಿನ್ನೆ ಕೋರ್ಟ್‌ನಲ್ಲಿ ವಿಚಾರಣೆ ಮುಗಿಸಿ ಪವಿತ್ರಾ ಪೊಲೀಸ್ ವ್ಯಾನ್ ಹತ್ತಿದಾಗ ಅವರನ್ನು ನೋಡಲು ಪುತ್ರಿ ಖುಷಿ ಗೌಡ ಆಗಮಿಸಿದ್ದು, ನೂಕುನುಗ್ಗಲಿನ ನಡುವೆ ತಾಯಿ ಜೊತೆ ಮಾತನಾಡಲು ಅಕೆ ಹರಸಾಹಸ ಪಡಬೇಕಾಯಿತು. ಪವಿತ್ರಾ ಗೌಡ ಅವರ ಕುಟುಂಬದ ಇತರೆ ಸದಸ್ಯರು ಕೂಡ ಪೊಲೀಸ್ ವ್ಯಾನ್‌ನ ಪಕ್ಕದಲ್ಲಿ ನಿಂತು ಮಾತನಾಡಿದ್ದರು.

## ರೈಲ್ವೆ ಯೋಜನೆಗಳ ಅನುಷ್ಠಾನಕ್ಕೆ ಕ್ರಮ: ಸೋಮಣ್ಣ

ಪಾಲ್ಗೊಂಡ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿರುವ ರೈಲ್ವೆ ಯೋಜನೆಗಳ ಸಮಸ್ಯೆ ಬಗ್ಗೆ ರೈಲ್ವೆ ಮಂತ್ರಿಗಳು, ರೈಲ್ವೆ ಬೋರ್ಡ್ ಛೇರ್ಮನ್ ರವರ ಜತೆ-ಯೂ ಚರ್ಚಿಸಿದ್ದೇನೆ. ನೆನೆಗುದಿಗೆ ಬಿದ್ದಿರುವ ಯೋಜನೆಗಳನ್ನು ನಮ್ಮ ಕಾಲದಲ್ಲಿ ಅನುಷ್ಠಾನಕ್ಕೆ ತಂದು ಸಾರ್ವಜನಿಕರಿಗೆ ಸಮರ್ಪಣೆ ಮಾಡುವುದಾಗಿ ಹೇಳಿದರು.

ರಾಜ್ಯದಲ್ಲಿ ತೈಲ ಬೆಲೆ ಏರಿಕೆ ಮಾಡಿರುವ ವಿಚಾರದ ಬಗ್ಗೆ ಪ್ರಸ್ತಾಪಿಸಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬುದ್ಧಿವಂತರು. ಯಾವುದೋ ಒತ್ತಡದಿಂದ ಒದ್ದಾಡುತ್ತಾ ಇದ್ದಾ-ರೆ. ಅವರ ಮನಸ್ಸಿಗೆ ಸರಿ ಇದೆಯಾ ಅನ್ನುವುದನ್ನು ಅವರು ವೈಯುಕ್ತಿಕವಾಗಿ ಹೇಳಿದರೆ ಸಾಕಾಗಿದೆ. ಪದೇ ಪದೇ ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡುವುದು ಸರಿಯಲ್ಲ ಎಂದರು. ರಾಜ್ಯದಲ್ಲಿ ದಿಢೀರನೇ ಬೆಲೆ ಏರಿಕೆ ಮಾಡಿದ್ದಾರೆ. ನಾನು ಒಬ್ಬ ಕೇಂದ್ರ ಮಂತ್ರಿಯಾಗಿ ಯಾವ ಮಟ್ಟಕ್ಕೆ ಮಾತನಾಡಬೇಕೋ ಅದನ್ನು ಮಾತ್ರ ಮಾತನಾಡುತ್ತೇನೆ. ಬೆಲೆ ಏರಿಕೆ ಸಮಂಜಸವಾಗಿದೆಯಾ ಎನ್ನುವುದನ್ನು ಅವರೇ ತೀರ್ಮಾನ ಮಾಡಲಿ ಎಂದರು.

ಜೂ. 21 ರಂದು ವಿಶ್ವ ಯೋಗ ದಿನಾಚರಣೆಯನ್ನಾಗಿ ಆಚರಣೆ ಮಾಡಲು ಒಪ್ಪಿಗೆ ಸಿಕ್ಕಿ 10 ವರ್ಷಗಳಾಗಿವೆ. ವಿಶ್ವದ 176 ದೇಶಗಳು ಕೂಡ ಇಂದು ಯೋಗ ದಿನಾಚರಣೆಯನ್ನು ಆಚರಿಸುತ್ತಿವೆ. ಪ್ರಧಾನಿಯವರು ಜಮ್ಮು-ಕಾಶ್ಮೀರದಲ್ಲಿ ಯೋಗ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದಾರೆ ಎಂದರು. ಇಡೀ ದೇಶದಲ್ಲೇ ಯೋಗ ದಿನಾಚರಣೆ ಮಾಡಲಾಗುತ್ತಿದೆ. ಆದರೆ ನಮ್ಮ ಜಿಲ್ಲೆಯ ಇಬ್ಬರು ಸಚಿವರು ದಿನಾಚರಣೆಗೆ ಬರಬೇಕಿತ್ತು. ಅವರಿಬ್ಬರಿಗೂ ಆರೋಗ್ಯ ತುಂಬಾ ಚೆನ್ನಾಗಿದೆ ಅನಿಸುತ್ತದೆ. ಹಾಗಾಗಿ ಅವರು ಬಂದಿಲ್ಲ. ಅವರಿಗೆ ಒಳ್ಳೆಯದಾಗಲಿ ಎಂದರು. ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಕುರಿತು ನಡೆದಿರುವ ಸಭೆಯಲ್ಲಿ ಏನಾಗಿದೆ ಎಂಬುದು ನನಗೆ ಗೊತ್ತಿಲ್ಲ. ಈ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ನಾನು ಮಾತನಾಡುತ್ತೇನೆ. ಅವರ ಭಾವನೆಗಳನ್ನು ತಿಳಿದುಕೊಂಡು ಆ ನಂತರ ಸ್ಪಂದಿಸುತ್ತೇನೆ ಎಂದು. ಮಧುಗಿರಿ ತಾಲ್ಲೂಕು ಚಿನ್ನೇನಹಳ್ಳಿಯಲ್ಲಿ ಮೃತಪಟ್ಟಿರುವವರಿಗೆ ಪರಿಹಾರ ಸಿಕ್ಕಿಲ್ಲ ಎಂಬ ಬಗ್ಗೆ ಪತ್ರಕರ್ತರು ಗಮನ ಸೆಳೆದಾಗ ತಕ್ಷಣವೇ ಈ ಕೆಲಸವನ್ನು ಮಾಡಿಸುತ್ತೇನೆ. ಇದಕ್ಕಿಂತ ದೊಡ್ಡ ಕೆಲಸ ಬೇರೊಂದಿಲ್ಲ ಎಂದು ಪ್ರತಿಕ್ರಿಯಿಸಿದರು. ನಾನು ಮೊದಲ ಬಾರಿಗೆ ಲೋಕಸಭೆಗೆ ಪ್ರವೇಶ ಮಾಡಿದ್ದೀನಿ. ಸೋಮವಾರ, ಮಂಗಳವಾರ ಸಂಸದರ ಪ್ರಮಾಣ ವಚನ ಇದೆ. ಅದಾದ ಮೇಲೆ ಸಂಸತ್‌ನ ಚಟುವಟಿಕೆಗಳು ಆರಂಭವಾಗುತ್ತವೆ. ರಾಜ್ಯ ರಾಜಕೀಯದಲ್ಲಿ ನನಗೆ 35 ವರ್ಷಕ್ಕೂ ಅಧಿಕ ಅನುಭವವಿದೆ. ಈಗ ಕೇಂದ್ರ ಸರ್ಕಾರದ ಮಂತ್ರಿಯಾಗಿದ್ದೇನೆ, ನೋಡಿಕೊಂಡು ಕೆಲಸ ಮಾಡುತ್ತೇನೆ ಎಂದು ಅವರು ಹೇಳಿದರು.

# ಕೇಜ್ರಿ ಜಾಮೀನಿಗೆ ತಡೆ

ವಿಚಾರಣಾ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ತನ್ನ ಮನವಿಯನ್ನು ಜಾರಿ ನಿರ್ದೇಶನಾಲಯ ಉಲ್ಲೇಖಿಸಿದೆ. ಜಾರಿ ನಿರ್ದೇಶನಾಲಯದ ವಾದ ಆಲಿಸಿ ತೀರ್ಪು ನೀಡುವ ತನಕ ಅರವಿಂದ್ ಕೇಜ್ರಿವಾಲ್ ಅವರ ಜಾಮೀನು ಅರ್ಜಿ ಜಾರಿಗೆ ಬರುವುದಿಲ್ಲ ಎಂದು ನ್ಯಾಯಾಲಯ ಹೇಳಿದೆ. ನಿನ್ನೆ ಸಂಜೆ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ವಿಚಾರಣಾ ನ್ಯಾಯಾಲಯದ ನೀಡಿದ್ದ ಜಾಮೀನು ಪ್ರಶ್ನಿಸಿ ಜಾರಿ ನಿರ್ದೇಶನಾಲಯ ಅರ್ಜಿ ಅಲ್ಲಿಸಿತ್ತಿ ಜಾರಿ ನಿರ್ದೇಶನಾಲಯದ ಪರವಾಗಿ ಹೆಚ್ಚುವರಿ ಸಾಲಿಸಿಟರ್ ಜನರಲ್ ಎಸ್ ವಿ ರಾಜು, ತನ್ನ ಪ್ರಕರಣವನ್ನು ವಾದಿಸಲು ಸಂಸ್ಥೆಗೆ ಸರಿಯಾದ ಅವಕಾಶವನ್ನು ನೀಡಿಲ್ಲ ಎಂದು ವಾದಿಸಿ ವಿಚಾರಣಾ ನ್ಯಾಯಾಲಯದ ಆದೇಶಕ್ಕೆ ತಡೆ ಕೋರಿದರು.

ಅರವಿಂದ್ ಕೇಜ್ರಿವಾಲ್ ಅವರಿಗೆ ನೀಡಲಾದ ಸಮನ್ಸ್‌ಗಳನ್ನು ಪ್ರಶ್ನಿಸಿ ಸಲ್ಲಿಸಿದ ಅರ್ಜಿಯಲ್ಲಿ ಬಂಧನದಿಂದ ರಕ್ಷಣೆ ನೀಡಲು ದೆಹಲಿ ಹೈಕೋರ್ಟ್ ನಿರಾಕರಿಸಿದ ಬೆನ್ನಲ್ಲೇ ಜಾರಿ ನಿರ್ದೇಶನಾಲಯ ಮಾರ್ಚ್ 21 ರಂದು ಅವರನ್ನು ಬಂಧಿಸಿತ್ತು.

# ಯೋಗ ವಿಶ್ವ ಕ್ಷೇಮದ ರಾಯಭಾರಿ

ಪ್ರವಾಸೋದ್ಯಮದ ಹೊಸ ಪ್ರವೃತ್ತಿ ಹೊರಹೊಮ್ಮುತ್ತಿದೆ. ಪ್ರಪಂಚದಾದ್ಯಂತದ ಜನರು ಅಧಿಕೃತ ಯೋಗ ಕಲಿಯಲು ಭಾರತಕ್ಕೆ ಬರುತ್ತಿದ್ದಾರೆ ಇದು ಹೆಮ್ಮೆಯ ಸಂಗತಿ ಎಂದರು.. ಆತಿಥ್ಯ, ಪ್ರವಾಸೋದ್ಯಮ, ಉಡುಪು ಇತ್ಯಾದಿಗಳಿಗೆ ಸಂಬಂಧಿಸಿದ ಕ್ಷೇತ್ರಗಳು ಜನರ ದೊಡ್ಡ ಒಳಹರಿವು ಹೆಚ್ಚಾಗುತ್ತಿದೆ."ಅಂತಾರಾಷ್ಟ್ರೀಯ ಯೋಗ ದಿನದಂದು, ಯೋಗ ಮತ್ತು ಧ್ಯಾನದ ನಾಡಾದ ಕಾಶ್ಮೀರಕ್ಕೆ ಬರುವ ಭಾಗ್ಯ ನನಗೆ

ಆಧ್ಯಾತ್ಮಿಕ ಸಾಮರ್ಥ್ಯ ಪ್ರಮುಖ ಭಾಗವಾಗಿದೆ. ಪ್ರಧಾನಿ ವಿಶ್ವದಲ್ಲಿ ಯೋಗಕ್ಕೆ ವಿಶೇಷ ಸ್ಥಾನವನ್ನು ನೀಡುವ ದೃಷ್ಟಿ ಹೊಂದಿದ್ದರು ಮತ್ತು ಪ್ರತಿ ವರ್ಷ, ಈ ದಿನ, ಯೋಗ ಉದ್ದಕ್ಕೂ ಆಚರಿಸಲಾಯಿತು.

ಮದ್ಯ ಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ಮಾತನಾಡಿ ಅಂತರಾಷ್ಟ್ರೀಯ ಯೋಗ ದಿನಾಚರಣೆ-ಯ ಒಂದು ದಿನ ಮುಂಚಿತವಾಗಿ, ಅವರ ಸಿಬ್ಬಂದಿ ಗುರುವಾರ ಬಿಡುಗಡೆ ಮಾಡಿದ ವೀಡಿಯೊದಲ್ಲಿ ಅವರು ಸವಾಲಿನ ಯೋಗ ವ್ಯಾಯಾಮವನ್ನು ತೋರಿಸಿ ಎಲ್ಲರೂ ಅಳವಡಿಸಿಕೊಳ್ಳುವಂತೆ ಮನವಿ ಮಾಡಿದ್ದಾರೆ ಮಹಾರಾಷ್ಟ್ರದ ಮುಖ್ಯಮಂತ್ರಿ ಏಕನಾಥ ಶಿಂಧೆ ಮಾತನಾಡಿ ಜನರು ಯೋಗವನ್ನು ದೈನಂದಿನ ಜೀವನದ ಅವಿಭಾಜ್ಯ ಅಂಗವನ್ನಾಗಿ ಮಾಡಿಕೊಳ್ಳಬೇಕು ಎಂದು ನಾಗರಿಕರಿಗೆ ಕರೆ ನೀಡಿದ್ದಾರೆ.

ಸಿಕ್ಕಿದೆ. ಶ್ರೀನಗರದಲ್ಲಿ, ಯೋಗ ಮಾಡುವ ಅವಕಾಶ ಒದಗಿ ಬಂದಿದೆ. ಕಳೆದ 10 ವರ್ಷಗಳಲ್ಲಿ ಯೋಗದ ವಿಸ್ತರಣೆ ಯೋಗಕ್ಕೆ ಸಂಬಂಧಿಸಿದ ಗ್ರಹಿಕೆ ಬದಲಾಯಿಸಿದೆ.ಜಗತ್ತು

ಹೊಸ ಯೋಗ ಆರ್ಥಿಕತೆಯನ್ನು ನೋಡುತ್ತಿದೆ. ಈ ವರ್ಷದ ಧ್ಯೇಯವಾಕ್ಯ, "ಸ್ವಯಂ ಮತ್ತು ಸಮಾಜಕ್ಕಾಗಿ

ಯೋಗ", ವೈಯಕ್ತಿಕ ಯೋಗಕ್ಷೇಮ ಮತ್ತು ಸಾಮಾಜಿಕ ಸಾಮರಸ್ಯವನ್ನು ಬೆಳೆಸುವಲ್ಲಿ ಯೋಗದ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ತಿಳಿಸಿದರು.

ದೇಶದ ಎಲ್ಲ ಜನರಿಗೆ ಮತ್ತು ವಿಶ್ವದ ಮೂಲೆ ಮೂಲೆಗಳಲ್ಲಿ ಯೋಗ ಮಾಡುತ್ತಿರುವವರಿಗೆ ಅಭಿನಂದನೆ ಸಲ್ಲಿಸಿದ ಅವರು, ಕಳೆದ 10 ವರ್ಷಗಳಿಂದಹೊಸ ಯೋಗ ಆರ್ಥಿಕತೆ-ಗೆ ಜಗತ್ತು ಸಾಕ್ಷಿಯಾಗಿದೆ ಎಂದರು. ವಿಶ್ವಸಂಸ್ಥೆಯಲ್ಲಿ ಅಂತರಾಷ್ಟ್ರೀಯ ಯೋಗ ದಿನ ಆಚರಿಸುವ ಕುರಿತು ಭಾರತದ ಪ್ರಸ್ತಾವನೆಯನ್ನು 177 ರಾಷ್ಟ್ರಗಳು ಬೆಂಬಲಿಸಿವೆ ಕಾಶ್ಮೀರ ನೆಲದಿಂದ, ಅಂತರರಾಷ್ಟ್ರೀಯ ಯೋಗ ದಿನದಂದು ಪ್ರಪಂಚದಾದ್ಯಂತದ ಪ್ರತಿಯೊಬ್ಬರನ್ನು ಅಭಿನಂದಿಸುವುದಾಗಿ ಹೇಳಿದ ಅವರು 2015 ರಲ್ಲಿ, ದೆಹಲಿಯ ಕರ್ತವ್ಯಪಥದಲ್ಲಿ, 35,000 ಜನರು ಯೋಗಾಸನಗಳನ್ನು ಮಾಡಿ ದಾಖಲೆ ಬರೆದಿದ್ದರು ಎಂದರು. 30 ನಿಮಿಷಗಳ ಯೋಗಾಭ್ಯಾಸ ಬೆಳಗ್ಗೆ 7 ಗಂಟೆಗೆ ಆರಂಭವಾಗಬೇಕಿತ್ತು ಆದರೆ ಮಳೆಯಿಂದಾಗಿ ತಡವಾಯಿತು. ಕಾರ್ಯಕ್ರಮದಲ್ಲಿ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಮತ್ತು ಆಯುಷ್ ಸಚಿವ ಪ್ರತಾಪ್ರರಾವ್ ಗಣಪತರಾವ್ ಜಾಧವ್ ಸೇರಿದಂತೆ ಇತರರು ಭಾಗವಹಿಸಿದ್ದರು.. 101 ವರ್ಷದ ಶಿಕ್ಷಕಿಗೆ ಪದ್ಮಶ್ರೀ ಯೋಗದ ಬಗ್ಗೆ ಜಾಗೃತಿ ಮೂಡಿಸಲು ಇಡೀ ಜೀವನವನ್ನು ಮುಡಿಪಾಗಿಟ್ಟ ಫ್ರಾನ್ಸ್‌ನ 101 ವರ್ಷದ ಮಹಿಳಾ ಯೋಗ ಶಿಕ್ಷಕಿಗೆ ಪದ್ಮಶ್ರೀ ನೀಡಿ ಗೌರವಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಯೋಗದ ಕುರಿತು ಸಂಶೋಧನೆನಡೆಸಲಾಗುತ್ತಿದೆ ಪ್ರಪಂಚದಾದ್ಯಂತದ ಪ್ರತಿಷ್ಠಿತ ವಿಶ್ವವಿದ್ಯಾಲಯಗಳು ಮತ್ತು ಸಂಸ್ಥೆಗಳು ಸಂಶೋಧನಾ ಪ್ರಬಂಧಗಳನ್ನು ಪ್ರಕಟಿಸುತ್ತಿವೆ, "ಎಂದು ತಿಳಿಸಿದ್ದಾರೆ. ಈ ಬಾರಿ ಶ್ರೀನಗರದಲ್ಲಿ ಚಾಲನೆ 2015 ರಿಂದ, ದೆಹಲಿಯ ಕರ್ತವ್ಯ ಪಥ್, ಚಂಡೀಗಢ, ಡೆಹ್ರಾಡೂನ್, ರಾಂಚಿ, ಲಕ್ನೋ, ಮೈಸೂರು ಮತ್ತು ನ್ಯೂಯಾರ್ಕ್‌ನಲ್ಲಿರುವ ವಿಶ್ವಸಂಸ್ಥೆಯ ಪ್ರಧಾನ ಕಚೇರಿ ಸೇರಿದಂತೆ ವಿವಿಧ ಅಪ್ರತಿಮ ಸ್ಥಳಗಳಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಆಚರಣೆಗಳನ್ನು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಮುನ್ನಡೆಸಿದ್ದಾರೆ. ಈ ಬಾರಿ ಕಣಿವೆ ಪ್ರದೇಶ ಶ್ರೀನಗರದಲ್ಲಿ ಯೋಗ ಮುನ್ನೆಡೆಸುವ ಮೂಲಕ ಸಮಾಜವನ್ನು ಒಗ್ಗೂಡಿಸುವ ಕೆಲಸ ಮಾಡಿದ್ದಾರೆ.

## ರಾಜಕೀಯ ಅಂತ್ಯ ಜನ ತೀರ್ಮಾನಿಸುತ್ತಾರೆ: ಡಿಕೆಶಿ

ಇದೆ. ಅವರ ಋಣ ತೀರಿಸಬೇಕಿದೆ. ಹಾಗಾಗಿ. ನನಗೆ ಶಕ್ತಿ ಕೊಡಿ ಎಂದು ಕೇಳಿದ್ದೇನೆ. ನಮ್ಮ ಮೇಲೆ ವಿಶ್ವಾಸವಿದ್ದರೆ ನನಗೆ ಶಕ್ತಿ ಕೊಡುತ್ತಾರೆ ಎಂದರು.

ಸ್ವಪ್ರತಿಷ್ಠೆಗಾಗಿ ದೇಶದ ಸಂಪತ್ತನ್ನು ಹಾಳು ಮಾಡುತ್ತಿದ್ದಾರೆ ಎಂಬ ಬಿಜೆಪಿ ನಾಯಕರೊಬ್ಬರ ಹೇಳಿಕೆಗೆ ಉತ್ತರಿಸಿದ ಅವರು, ಚನ್ನಪಟ್ಟಣ ಉಪಚುನಾವಣೆ ನಡೆದರೆ ಕನಕಪುರದಲ್ಲಿ ಏಕೆ ಉಪಚುನಾವಣೆ ನಡೆಯುತ್ತದೆ.

ಕನಕಪುರದ ಶಾಸಕನಾಗಿ,ಕಾಂಗ್ರೆಸ್ ಅಧ್ಯಕ್ಷನಾಗಿ.ಉಪಮುಖ್ಯಮಂತ್ರಿಯಾಗಿ ನನಗೆ ಜವಾಬ್ದಾರಿ ಇದೆ. ಉಪಚುನಾವಣೆಯಲ್ಲಿ ನನ್ನದೇ ನಾಯಕತ್ವ.ನನ್ನದೇ ಮುಖಂಡತ್ವ ಮುಖ್ಯಮಂತ್ರಿ ಸಿದ್ದರಾಮಯ್ಯರವರ ಜತೆಗೂಡಿ ಉಪಚುನಾವಣೆಯಲ್ಲಿ ಕೆಲಸ ಮಾಡುತ್ತೇನೆ.ಜನ ಎಲ್ಲವನ್ನೂ ನಿರ್ಧರಿಸುತ್ತಾರೆ ಎಂದರು.

ಯೋಗ ಶಿಕ್ಷಣ

ಯೋಗ ಆರೋಗ್ಯಕ್ಕೆ ಒಳ್ಳೆಯದು, ಯೋಗ ನಮ್ಮ ಸಂಸ್ಕೃತಿಯ ಭಾಗ, 5 ಸಾವಿರ ವರ್ಷಗಳಿಂದ ವಿಶ್ವಕ್ಕೆ ಯೋಗವನ್ನು ಹಂಚಿದ್ದೇವೆ. ಯೋಗಕ್ಕೆ ಹೆಚ್ಚು ಪ್ರಚಾರದ ಅಗತ್ಯವಿದೆ. ಶಾಲಾ-ಕಾಲೇಜುಗಳಲ್ಲೂ ಯೋಗ ಶಿಕ್ಷಣ ನೀಡುವ ಬಗ್ಗೆ ರೂಪು ರೇಷೆಗಳನ್ನು ತೀರ್ಮಾನ ಮಾಡುತ್ತೇವೆ ಎಂದರು.ಈ ಸಂದರ್ಭದಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಉಪಸ್ಥಿತರಿದ್ದರು.

## ರೇಣುಕಾಸ್ವಾಮಿ ಹತ್ಯೆ 28 ಸ್ಥಳಗಳಲ್ಲಿ ಮಹಜರು

ತಿಳಿಸಿದ್ದಾರೆ. ಪಟ್ಟಣಗೆರೆ ವಿನಯ್ ಮೊಬೈಲ್‌ನಲ್ಲಿ ಅತಿ ಮುಖ್ಯವಾದ ಸಾಕ್ಷ್ಯಾಧಾರ ದೊ-ರೆತಿದ್ದು, ಅದನ್ನು ಕಳುಹಿಸಿದ ವ್ಯಕ್ತಿ ಯಾರೆಂಬ ಬಗ್ಗೆ ವಿನಯ್ ಉಪಸ್ಥಿತಿಯಲ್ಲಿ ವಿಚಾರಣೆ ಮಾಡಬೇಕಿದೆ. ಹೀಗಾಗಿ ವಿನಯ್‌ನನ್ನು ಪೊಲೀಸ್ ಕಸ್ಟಡಿಗೆ ನೀಡುವಂತೆ ಮನವಿ ಮನವಿ ಮಾಡಿದ್ದರು. ಈ ಮನವಿ ಪುರಸ್ಕರಿಸಿದ ನ್ಯಾಯಾಲಯವು, ಆತನನ್ನು ಪೊಲೀಸ್ ಕಸ್ಟಡಿಗೆ ನೀಡಿದೆ.

**ಮೂವರು ವಶಕ್ಕೆ:**

ಪ್ರಕರಣದ ಸಂಬಂಧ ದರ್ಶನ್ ರೇಣುಕಾಸ್ವಾಮಿಗೆ ಹಲ್ಲೆ ನಡೆಸಿದಾಗ ಅದನ್ನೂ ವಿಡಿಯೋ ಮಾಡಿಕೊಂಡಿದ್ದ ಮೂವರು ಹುಡುಗರನ್ನು ಪೊಲೀಸರು ವಶಕ್ಕೆ ಪಡೆಯಲಾಗಿದೆ.

ಹಲ್ಲೆ ವಿಡಿಯೋವನ್ನು ಬೇರೆ ಯಾರಿಗೋ ಫಾರ್ವರ್ಡ್ ಮಾಡಿದ್ದು, ಇದಾದ ನಂತರವೇ ಕೊಲೆ ಪ್ರಕರಣ ಬೆಳಕಿಗೆ ಬಂದಿತ್ತು. ಕೊಲೆ ಪ್ರಕರಣ ಬೆಳಕಿಗೆ ಬಂದ ಬೆನ್ನಲ್ಲೇ ಮೂವರು ನಾಪತ್ತೆಯಾಗಿದ್ದರು. ನಿನ್ನೆ ಮಧ್ಯಾಹ್ನ ಮೂವರನ್ನು ಬಂಧಿಸಲಾಗಿದ್ದು, ವಿಚಾರಣೆ ವೇಳೆ ವಿಡಿಯೋ ಮಾಡಿದ್ದಾಗಿ ಹೇಳಿದ್ದಾರೆ ಎನ್ನಲಾಗಿದೆ.

ಮೊಬೈಲ್ ಪರಿಶೀಲನೆ ವೇಳೆ ವಿಡಿಯೋ ಡಿಲೀಟ್ ಮಾಡಿರುವುದು ತಿಳಿದುಬಂದಿದೆ. ಸದ್ಯ ಪೊಲೀಸರು ವಿಡಿಯೋ ರಿಟ್ರೀವ್ ಪ್ರಕ್ರಿಯೆ ನಡೆಸುತ್ತಿದ್ದಾರೆ. ವಿಡಿಯೊ ರಿಟ್ರೀವ್ ಆದರೆ ಕೇಸ್‌ಗೆ ಮತ್ತೊಂದು ಮಹತ್ವದ ಸಾಕ್ಷ್ಯ ಆಗಲಿದೆ.

# ಈಗ ಚನ್ನಪಟ್ಟಣದ ಮೇಲೆ ಮಮತೆ ಬಂದಿದೆ: ಎಚ್‌ಡಿಕೆ ವ್ಯಂಗ್ಯ

ಕೊಡುಗೆ ಏನು ಎಂದು ಪ್ರಶ್ನಿಸಿದರು.

ಚನ್ನಪಟ್ಟಣದಿಂದ ಉಪಚುನಾವಣೆಯಲ್ಲಿ ಡಿ.ಕೆ ಶಿವಕುಮಾರ್ ಕಣಕ್ಕಿಳಿಯುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಯಾರು ಬೇಕಾದರೂ ಅಭ್ಯರ್ಥಿಯಾಗಬಹುದು ಬಿಜೆಪಿ-ಜೆಡಿಎಸ್ ಅಭ್ಯರ್ಥಿ ಯಾರು ಎಂಬದನ್ನು ಕಾಲ ತೀರ್ಮಾನಿಸುತ್ತದೆ ಎಂದರು.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಕಡಿಮೆ ಸೀಟು ಬರಲು ಇವಿಎಂ ಕಾರಣ ಎಂಬ ಡಿ.ಕೆ ಶಿವಕುಮಾರ್ ಆರೋಪಕ್ಕೆ ಕಿಡಿಕಾರಿದ ಅವರು, 2023ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ 136 ಸ್ಥಾನ ಗೆದ್ದಿತ್ತಲ್ಲ ಆಗ ಇವಿಎಂ ದೋಷವಿತ್ತಾ ಎಂದು ಪ್ರಶ್ನಿಸಿದರು.

ಯೋಗಕ್ಕೆ ನಮ್ಮ ಸಂಸ್ಕೃತಿಯಲ್ಲಿ ವಿಶೇಷ ಸ್ಥಾನವಿದೆ. 2014 ರಿಂದ ಅಂತಾರಾಷ್ಟ್ರೀಯ ಮಟ್ಟದಲ್ಲಿ ಯೋಗದಿನ ಆಚರಣೆ ನಡೆದಿದೆ. ಪ್ರಧಾನಿ ಮೋದಿ ಅವರು ಯೋಗಕ್ಕೆ ಹೆಚ್ಚು ಪ್ರೋತ್ಸಾಹ ನೀಡಿದ್ದರಿಂದ ಪ್ರಚಾರ ದೊರೆತಿದೆ. ಯೋಗ ಆರೋಗ್ಯವನ್ನು ಸುಧಾರಿಸುತ್ತದೆ. ಕಾಶ್ಮೀರದಲ್ಲಿ ಪ್ರಧಾನಿ ಮೋದಿ ಅವರು ಯೋಗದಿನಾಚರಣೆ ಕಾರ್ಯಕ್ರಮದಲ್ಲಿ ಭಾಗಿಯಾಗಿರುವುದು ಒಳ್ಳೆಯ ಸಂದೇಶ ಎಂದರು.

## ಕಾಂಗ್ರೆಸ್ ಸರ್ಕಾರದ ಯೋಜನೆಗಳು ಅತ್ತೆ ಮಾಡಿದ್ದನ್ನು ಅಳಿಯ ದಾನ ಮಾಡಿ



ಮೂಡಲಗಿ:ಜೂ,21-

ಕಾಂಗ್ರೆಸ್ ಸರ್ಕಾರದ ಯೋಜನೆಗಳು " ಅತ್ತೆ ಮಾಡಿದ್ದನ್ನು ಅಳಿಯ ದಾನ ಮಾಡಿದಂತಿದೆ". ದಾನ ಮಾಡುವುದಕ್ಕೆ ನಮ್ಮ ವಿರೋಧವಿಲ್ಲ ಆದರೆ ಖಜಾನೆ ಬರಿದು ಮಾಡಿ, ಒಂದು ಕಡೆ ಕೊಟ್ಟು ಮತ್ತೊಂದು ಕಡೆಯಿಂದ ಕಸಿದುಕೊಳ್ಳುವ ಕಾಂಗ್ರೆಸ್ ಧೋರಣೆಯನ್ನು ಬಿಜೆಪಿ ಖಂಡಿಸುತ್ತದೆ ಎಂದು ಬಿಜೆಪಿ ಅರಭಾವಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಗುರುವಾರದಂದು ಪಟ್ಟಣದ ಕಲ್ಮೇಶ್ವರ ವೃತ್ತದಲ್ಲಿ ಬಿಜೆಪಿ ಅರಬಾವಿ ಮಂಡಲದ ಕಾರ್ಯಕರ್ತ-ರಿಂದ ಪ್ರತಿಭಟನೆ ನಡೆಸಿ, ತಹಶೀಲ್ದಾರ ಮಹಾದೇವ ಸನ್ನಮುರಿ ಅವರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು ಇಂಧಗಳ ತೆರಿಗೆ ಏರಿಕೆಯಿಂದ ರಾಜ್ಯದ ಖಜಾನೆಗೆ ಹೆಚ್ಚುವರಿ ತೆರಿಗೆ ವಸೂಲಿಯಾಗಲಿದೆ ಎನ್ನುವ ಕಾರಣ-ಕ್ಕಾಗಿ ಬೆಲೆ ಏರಿಕೆ ಮಾಡಲಾಗಿದೆ. ಇದರಿಂದ ಸಾರಿಗೆ, ಸರಕು ಸಾಗಾಣಿಕೆ ವೆಚ್ಚ ಕೂಡ ಏರಿಕೆಯಾಗಿ ಜನಸಾಮಾನ್ಯರ ಜೀವನದ ಮೇಲೆ ನೇರ ಪರಿಣಾಮ ಬೀರಲಿದೆ ಎಂದು ಸರ್ಕಾರದ ವಿರುದ್ಧ ಹರಿಹಾಯ್ದರು. ಬಿಜೆಪಿ ಅರಬಾವಿ ಮಂಡಲದ ಪ್ರಧಾನ ಕಾರ್ಯದರ್ಶಿ ಮಹಾಂತೇಶ ಕುಡಚಿ ಮಾತನಾಡಿ, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಎಲ್ಲ ಬೆಲೆಗಳನ್ನು ಇಳಿಸುತ್ತೇವೆ ಹಾಗೂ ಉಚಿತ ಐದು ಭಾಗ್ಯಗಳನ್ನು ನೀಡುತ್ತೇವೆ ಎಂದು ಹೇಳಿತ್ತು. ಆದರೆ ರಾಜ್ಯದ ಜನತೆಗೆ ಆಮಿಷ ಒಡ್ಡಿ ಅಧಿಕಾರಕ್ಕೆ ಬಂದ ಬಳಿಕ ಉಚಿತ ಭಾಗ್ಯಗಳಿಗೋಸ್ಕರ ಮೊದಲು ವಿದ್ಯುತ್ ದರ ಹೆಚ್ಚಳ, ಮದ್ಯದ ಬೆಲೆ ಹೆಚ್ಚಳ, ರಿಜಿಸ್ಟೇಷನ್ ಸ್ಟಾಂಪ್ ದರ ಸೇರಿದಂತೆ ವಿವಿಧ ದರಗಳನ್ನು ಹೆಚ್ಚಳ ಮಾಡಿದ್ದಲ್ಲದೆ ಈಗ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಮಾಡಿದೆ. ಗಾಯದ ಮೇಲೆ ಬರೆ ಎಳೆದಂತೆ ರೈತ ಹೋರಾಟಗಾರರನ್ನು ಜೈಲಿಗೆ ತಳ್ಳಿ ರೈತರ ದನಿಯನ್ನು ಅಡಗಿಸಲು ರೈತರೊಂದಿಗೆ ಅಮಾನವೀಯವಾಗಿ ನಡೆದು-ಕೊಂಡಿದೆ. ಈ ವರ್ಷ ಮುಂಗಾರು ಮಳೆ ಆಶಾದಾಯಕವಾಗಿ ಆಗುತ್ತಿದ್ದರೂ, ಸರ್ಕಾರ ಬಿತ್ತನೆ ಬೀಜಗಳ ಬೆಲೆಯನ್ನು ಏರಿಸಿ, ಗೊಬ್ಬರಗಳು ಸಿಗದೆ ರೈತರು ಅಲೆದಾಡುವಂತಾಗಿದೆ ಎಂದು ದೂರಿದರು. ಪ್ರತಿಭಟನೆಯಲ್ಲಿ ಹಿರಿಯ ಬಿಜೆಪಿ ಮುಖಂಡ ರವೀಂದ್ರ ಸೋನವಾಲ್ಕರ, ಕಾರ್ಯಕರ್ತರಾದ ಹಣಮಂತ ಗುಡ್ಲಮನಿ, ಪಾಂಡು ಮಹೇಂದ್ರಕರ್, ಅನ್ವರ ನಾಧಫ್, ಈರಪ್ಪ ಬನ್ನೂರ, ರೇವಪ್ಪ ಕುರುಶೆಟ್ಟಿ, ಪರಪ್ಪ ಹಡಪದ, ಚೇತನ ಹೊಸಕೋಟಿ ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳ ಬಿಜೆಪಿ ಕಾರ್ಯಕರ್ತರು ಮತ್ತಿತರರು ಉಪಸ್ಥಿತರಿದ್ದರು.

# ವಿದೇಶಿ ಕನ್ಸಲ್ಟೆನ್ಸಿ ನೇಮಕಕ್ಕೆ ಬಿವೈವಿ ಆಕ್ಷೇಪ

ವಿದೇಶಿ ತಜ್ಞರ ಮೇಲುಸ್ತುವಾರಿ ಇರಲಿಲ್ಲ. ಆಗ ಕರ್ನಾಟಕದಲ್ಲಿ ಹೆಚ್ಚಿನ ಹೂಡಿಕೆಗಳು ಆಗಿದ್ದವು. ಸಿದ್ದರಾಮಯ್ಯರವರಿಗೆ ವಿದೇಶಿ ತಜ್ಞರು ಸಹಕಾರ ಮಾಡುತ್ತಾರೆ ಎಂದು ನನಗೆ ಅನಿಸಿಲ್ಲ. ರಾಜ್ಯಕ್ಕೆ ಹೂಡಿಕೆ ಬರುವುದನ್ನು ಸಿದ್ದರಾಮಯ್ಯ ಬಯಸುತ್ತಾರೋ ಇಲ್ಲವೋ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು. ರಾಜ್ಯದ ಹಣಕಾಸು ಹೂಡಿಕೆಗೆ ವಿದೇಶಿ ಕನ್ಸಲ್ಟೆನ್ಸಿ ಹೂಡಿಕೆಗೆ ರಾಜ್ಯದಲ್ಲೇ ಸೂಕ್ತ ವ್ಯಕ್ತಿಯನ್ನು ಹುಡುಕಬೇಕಿತ್ತು. ಹಲವು ಐಎಸ್ ಅಧಿಕಾರಿಗಳು ಇದ್ದಾರೆ. ಅವರನ್ನೇ ಮೇಲುಸ್ತುವಾರಿ ಮಾಡಬಹುದಾಗಿತ್ತು ಎಂದು ವಿಜಯೇಂದ್ರ ಹೇಳಿದರು. ಚನ್ನಪಟ್ಟಣ ಅಭ್ಯರ್ಥಿ ಆಯ್ಕೆ ಶೀಘ್ರ ಚನ್ನಪಟ್ಟಣ ವಿಧಾಸನಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರ ಸ್ಪರ್ಧೆ ಬಗ್ಗೆ ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಡಿ.ಕೆ ಶಿವಕುಮಾರ್ ಈಗಾಗಲೇ ಶಾಸಕರಾಗಿದ್ದಾರೆ. ಆಗಲೂ ಅವರು ಚನ್ನಪಟ್ಟಣದಲ್ಲಿ ಸ್ಪರ್ಧೆಯ ಅಭಿಲಾಷೆ ವ್ಯಕ್ತಪಡಿಸಿದ್ದಾರೆ. ಇದು ಅವರ ಪಕ್ಷದ ತೀರ್ಮಾನ ಆದರೂ ಜನರ ಮನದಾಳದಲ್ಲಿ ಏನಿದೆ ಎಂಬುದು ಇನ್ನೂ ನಿಗೂಢವಾಗಿದೆ ಎಂದರು.

ಬೆಂಗಳೂರು ಗ್ರಾಮೀಣ ಲೋಕಸಭಾ ಕ್ಷೇತ್ರದಲ್ಲಿ ತಮ್ಮನ್ನು ಸೋಲಿಸುವವರೇ ಇಲ್ಲ ಎಂದು ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ ಸುರೇಶ್ ಹೇಳಿದ್ದರು. ಆದರೆ ಜನರ ತೀರ್ಪನ್ನು ನಾವೆಲ್ಲರೂ ನೋಡಿದ್ದೇವೆ ಎಂದರು. ಈ ಉಪಚುನಾವಣೆಗೆ ಅಭ್ಯರ್ಥಿ ಯಾರಾಗಬೇಕು ಎಂಬ ಬಗ್ಗೆ ಜೆಡಿಎಸ್ ನಾಯಕರ ಜತೆ ಚರ್ಚಿಸಿ ತೀರ್ಮಾನ ಮಾಡುತ್ತೇವೆ ಚನ್ನಪಟ್ಟಣ ಕ್ಷೇತ್ರದಲ್ಲಿ ಶಾಸಕರಾಗಿ ಕುಮಾರಸ್ವಾಮಿ ಅವರು ಅಭಿವೃದ್ಧಿ ಕೆಲಸ ಮಾಡಿದ್ದಾರೆ. ಎರಡೂ ಪಕ್ಷಗಳ ನಾಯಕರು ಜತೆಗೂಡಿ ಚರ್ಚಿಸಿ ಅಭ್ಯರ್ಥಿಯನ್ನು ಆಯ್ಕೆ ಮಾಡುವುದಾಗಿ ಹೇಳಿದರು. ದಾವಣಗೆರೆ ಲೋಕಸಭಾ ಕ್ಷೇತ್ರದ ಬಿಜೆಪಿ ಸೋಲಿಗೆ ಯಡಿಯೂರಪ್ಪ -ವಿಜಯೆಂದ್ರ ಕಾರಣ ಎಂಬ ಶಾಸಕ ಬಿ.ಪಿ ಹರೀಶ್ ಹೇಳಿಕೆಗೆ ಪ್ರತಿಕ್ರಿಯಿಸಿದ ವಿಜಯೇಂದ್ರ ಅವರು, ನಮ್ಮ ಶಾಸಕ ಮಿತ್ರರಾದ ಹರೀಶ್ ಆಗಲಿ ಅಥವಾ ಬೇರೆ ಯಾರೇ ಆಗಲಿ ಬಹಿರಂಗವಾಗಿ ಹೇಳಿಕೆ ಕೊಡುವುದರಿಂದ ಸಮಸ್ಯೆಗೆ ಪರಿಹಾರ ಸಿಗಲ್ಲ. ಅವರ ಸಮಸ್ಯೆಗೆ ಪರಿಹಾರ ಸಿಗುತ್ತದೆ ಎಂದರೆ ಏನು ಬೇಕಾದರೂ ಹೇಳಿಕೊಳ್ಳಲಿ ನನ್ನ ಅಭ್ಯಂತರವಿಲ್ಲ. ಆದರೆ, ಸಮಸ್ಯೆ ಇದ್ದರೆ ಪಕ್ಷದ ಕಚೇರಿಗೆ ಬಂದು ನನ್ನ ಜತೆ ಮಾತನಾಡಲಿ, ಹೇಳಿಕೆಗಳಿಂದ ಪಕ್ಷಕ್ಕೆ ಲಾಭ ಇಲ್ಲ ಸಮಸ್ಯೆ ಇದ್ದರೆ ಸರಿಪಡಿಸುತ್ತೇನೆ ಎಂದರು.

**ಕೇಂದ್ರ ಸಚಿವರಿಗೆ ಅಭಿನಂದನೆ:**

ರಾಜ್ಯದ ಕೇಂದ್ರ ಸಚಿವರಿಗೆ ಹಾಗೂ ಬಿಜೆಪಿ-ಜೆಡಿಎಸ್ ಸಂಸದರಿಗೆ ನಾಳೆ ಅಭಿನಂದನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಹೇಳಿದರು. ಬೆಂಗಳೂರಿನ ಅರಮನೆ ಮೈದಾನದಲ್ಲಿ ನಾಳೆ ಬೆಳಿಗ್ಗೆ 11 ಗಂಟೆಗೆ ಅಭಿನಂದನಾ ಕಾರ್ಯಕ್ರಮ ನಡೆಯಲಿದ್ದು, ರಾಜ್ಯದಿಂದ ಕೇಂದ್ರ ಸಚಿವರಾಗಿರುವ ನಿರ್ಮಲಾ ಸೀತಾರಾಮನ್, ಪ್ರಲ್ಹಾದ್‌ಜೋಷಿ, ಹೆಚ್.ಡಿ ಕುಮಾರಸ್ವಾಮಿ, ವಿ. ಸೋಮಣ್ಣ, ಶೋಭಾಕರಂದ್ಲಾಜೆ ಇವರುಗಳನ್ನು ಸನ್ಮಾನಿಸಲಾಗುವುದು. ಹಾಗೆಯೇ, ರಾಜ್ಯದಿಂದ ಲೋಕಸಭೆಗೆ ಆಯ್ಕೆಯಾಗಿರುವ ಬಿಜೆಪಿ-ಜೆಡಿಎಸ್‌ನ ಎಲ್ಲ 19 ಸಂಸದರನ್ನು ಸನ್ಮಾನಿಸಲಾಗುವುದು ಎಂದು ವಿಜಯೇಂದ್ರ ಹೇಳಿದರು.

ನಾಳಿನ ಈ ಕಾರ್ಯಕ್ರಮದಲ್ಲಿ ಬಿಜೆಪಿಯ ಎಲ್ಲ ಶಾಸಕರು, ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು, ಕಾರ್ಯಕರ್ತರುಗಳು ಭಾಗಿಯಾಗುವರು ಎಂದರು.

# ಚಿತ್ತಾಪೂರ ತಾಲೂಕಿಗೆ ಡಿ.ಸಿ. ಭೇಟಿ:ತಾಲೂಕಾ ಕ್ರೀಡಾಂಗಣ ಕಾಮಗಾರಿ ಜು. 30 ರೊಳಗೆ ಪೂರ್ಣಗೊಳಿಸಲು ಗಡುವು



ಕಲಬುರಗಿ:–

ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಗುರುವಾರ ಚಿತ್ತಾಪುರ ಮತ್ತು ಶಹಾಬಾದ ತಾಲೂಕಿನ ವಿವಿಧ ಇಲಾಖೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಸರ್ಕಾರಿ ಕಚೇರಿಗಳ ಕಾರ್ಯನಿರ್ವಹಣೆ ವೀಕ್ಷಿಸಿದ ಅವರು, ಚಿತ್ತಾಪೂರ ಪಟ್ಟಣದ ತಾಲೂಕಾ ಕ್ರೀಡಾಂಗಣದಲ್ಲಿ ನಿರ್ಮಾಣದ ಹಂತದಲ್ಲಿರುವ ವಿವಿಧ ಕ್ರೀಡೆಗಳ ಅಂಕಣ, ಮೈದಾನ ಕಾಮಗಾರಿಗಳನ್ನು ಬರುವ ಜುಲೈ 30 ರೊಳಗೆ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಗಡುವು ನೀಡಿದರು.

ಕ್ರೀಡಾ ಚಟುವಟಿಕೆಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪಟ್ಟಣದ ತಾಲೂಕಾ ಕ್ರೀಡಾಂಗಣದಲ್ಲಿ ಇಂಡೋರ್ ಸ್ಟೇಡಿಯಂ, ಫುಟಬಾಲ್ ಮೈದಾನ, ಸೆಟಲ್ ಬ್ಯಾಡ್ಮಿಂಟನ್, ವಾಲಿಬಾಲ್ ಅಂಕಣ ಹೀಗೆ ವಿವಿಧ ಕ್ರೀಡಾ ಕಾಮಗಾರಿಗಳನ್ನು ವೀಕ್ಷಿಸಿದ ಅವರು ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳಬೇಕು. ಉಳಿದ ಕಾಮಗಾರಿ ಜುಲೈ ಮಾಸಾಂತ್ಯಕ್ಕೆ ಮುಗಿಸಿದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಂದ ದಿನಾಂಕ ಪಡೆದು ಇದನ್ನು ಉದ್ಘಾಟಿಸಲಾಗುವುದೆಂದ ಅವರು, ಕ್ರೀಡಾಂಗಣದಕಂಪೌಂಡ್ ಗೋಡೆ ನಿರ್ಮಾಣಕ್ಕೆ ಕೂಡಲೆ ಪ್ರಸ್ತಾವನೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಇದಕ್ಕು ಮುನ್ನ ಚಿತ್ತಾಪೂರ ಪಟ್ಟಣದ ಸರ್ಕಾರಿ ಮೆಟ್ರಿಕ್ ನಂತರ ಬಾಲಕೀಯರ ವಸತಿ ನಿಲಯಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ನಿಲಯದ ವಿದ್ಯಾರ್ಥಿಗಳೊಂದಿಗೆ ಕುಶಲೋಪರಿ ವಿಚಾರಿಸುತ್ತಾ ವಸತಿ ನಿಲಯದಲ್ಲಿ ಟ್ಯೂಷನ್ ಹೇಳಲಾಗುತ್ತಿದಿಯೆ, ಆತ್ಮ ರಕ್ಷಣೆಗೆ ಕರಾಟೆ ತರಬೇತಿ ನೀಡಲಾಗುತ್ತಿದಿಯೇ, ವಸತಿ–ಊಟ ಚೆನ್ನಾಗಿ ನೀಡಲಾಗುತ್ತಿದಿಯೇ ಎಂದು ವಿದ್ಯಾರ್ಥಿನಿಯರನ್ನು ಪ್ರಶ್ನಿಸಿದರು. ನಿಲಯದ ಮಲಗುವ ಕೋಣೆ, ಅಡುಗೆ ಕೋಣೆ ವೀಕ್ಷಿಸಿ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡುವಂತೆ ವಾರ್ಡನ್ ಅವರಿಗೆ ಸೂಚಿಸಿದರು. ಪಟ್ಟಣದ ಬಹಾಪೇಟ್ ಅಂಗನವಾಡಿ ಕೇಂದ್ರಕ್ಕೂ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ದೈನಂದಿನ ನಲಿ–ಕಲಿ ಕಾರ್ಯಕ್ರಮ ಕುರಿತು ಮಾಹಿತಿ ಪಡೆದುಕೊಂಡರು. ಮಕ್ಕಳಿಗೆ ನೀಡಲಾಗುತ್ತಿರುವ ಪೌಷ್ಠಿಕ ಆಹಾರ ಸವಿಯುವ ಮೂಲಕ ಪರೀಕ್ಷಿಸಿದರು.

ನಂತರ ಪಟ್ಟಣದ ತಹಶೀಲ್ದಾರ ಕಚೇರಿ ಎದುರು ಹೊಸದಾಗಿ ನಿರ್ಮಿಸಲಾಗುತ್ತಿರುವ ಮಿನಿ ವಿಧಾನ ಸೌಧ ಕಟ್ಟಡಕ್ಕೆ ಭೇಟಿ ನೀಡಿ ಕಾಮಗಾರಿ ವೀಕ್ಷಿಸಿದರು. ಪೊಲೀಸ್ ಠಾಣೆ, ಸಾರ್ವಜನಿಕ ಆಸ್ಪತ್ರೆಗೂ ಭೇಟಿ ನೀಡಿದರು. ಇದೇ ಸಂದರ್ಭದಲ್ಲಿ ತಾಲೂಕಿನಲ್ಲಿ ಜಾನುವಾರುಗಳಿಗೆ ನೀಡಲಾಗುವ ಲಸಿಕಾಕರಣ ಕಾರ್ಯಕ್ಕೆ ಡಿ.ಸಿ. ಅವರು ಚಾಲನೆ ನೀಡಿದರು.

ಅರ್ಜಿ ವಿಲೇವಾರಿ ತ್ವರಿತಗೊಳಿಸಲು ಸೂಚನೆ: ಚಿತ್ತಾಪೂರ ತಾಲೂಕು ಭೇಟಿ ಪೂರ್ವ ರಸ್ತೆ ಮಧ್ಯೆ ಬರುವ ಶಹಾಬಾದ ಪಟ್ಟಣದ ನಾಡ ಕಚೇರಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು, ಸಾರ್ವಜನಿಕರಿಗೆ ಸಾಮಾಜಿಕ ಪಿಂಚಣಿ ಸೇರಿದಂತೆ ವಿವಿಧ ರೀತಿಯ ಕಂದಾಯ ಸೇವೆ ಅರ್ಜಿಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡುವಂತೆ ಸಿಬ್ಬಂದಿಗಳಿಗೆ ತಾಕೀತು ಮಾಡಿದರು. ಪಟ್ಟಣದ ರೈತ ಸಂಪರ್ಕ ಕೇಂದ್ರಕ್ಕೂ ಭೇಟಿ ನೀಡಿದ ಅವರು ರೈತರಿಗೆ ಸಕಾಲದಲ್ಲಿ ಬೀಜ, ರಸಗೊಬ್ಬರ ವಿತರಣೆ ಮಾಡಬೇಕು. ಯಾವುದೇ ಗೊಂದಲಕ್ಕೆ ಅವಕಾಶ ಮಾಡಿಕೊಡಬಾರದೆಂದು ಕೃಷಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿಗಳ ಜೊತೆ ಎಸ್.ಪಿ. ಅಕ್ಷಯ್ ಹಾಕೈ, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವಾರ್ ಸಿಂಗ್ ಮೀನಾ, ಪ್ರೊಬೇಷನರ್ ಐ.ಎ.ಎಸ್. ಅಧಿಕಾರಿ ಮೀನಾಕ್ಷಿ ಆರ್ಯ, ಸಹಾಯಕ ಆಯುಕ್ತ ಆಶಪ್ಪ ಪೂಜಾರಿ, ಚಿತ್ತಾಪೂರ ತಹಶೀಲ್ದಾರ ಅಮರೇಶ ಬಿರಾದಾರ, ತಾಲೂಕ ಪಂಚಾಯತ್ ಇ.ಓ. ನೀಲಗಂಗಾ ಬಬಲಾದ ಸೇರಿದಂತೆ ಮೊದಲಾದ ಅಧಿಕಾರಿಗಳಿದ್ದರು.

# ತೈಲ ಬೆಲೆ ಏರಿಕೆ : ರಾಜ್ಯ ಸರ್ಕಾರದ ವಿರುದ್ಧ ಕೂಡ್ಲಿಗಿಯಲ್ಲಿ ಬಿಜೆಪಿ ಪ್ರತಿಭಟನೆ




ಕೂಡ್ಲಿಗಿ:–

ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರವು ಸಾರ್ವಜನಿಕರ ಹಿತಕಾಪಾಡದೆ ದಿಡೀರ್ ಎಂದು ಪೆಟ್ರೋಲ್ ಮತ್ತು ಡೀಸೆಲ್ ಧರವನ್ನು ಹೆಚ್ಚಿಗೆ ಮಾಡಿರುವುದನ್ನು ವಿರೋಧಿಸಿ ಕೂಡ್ಲಿಗಿ ಬಿಜೆಪಿ ಮಂಡಲ ನೇತೃತ್ವದಲ್ಲಿ ಇಂದು ಪ್ರತಿಭಟನೆ ನಡೆಸಿ ಕೂಡ್ಲಿಗಿ ತಹಸೀಲ್ದಾರ ಮುಖೇನಾ ಸರ್ಕಾರಕ್ಕೆ ಮನವಿ ಸಲ್ಲಿಸಿದೆ.

ತೈಲ ಬೆಲೆ ಏರಿಕೆ ಇದು ಜನಸಾಮಾನ್ಯರಿಗೆ ತುಂಬಾ ಹೊರೆಯಾಗಿದ್ದು ಆಡಳಿತ ನಡೆಸುವ ಸರಕಾರವು ತಾವು ತೆಗೆದುಕೊಳ್ಳುವ ನಿರ್ಧಾರ ಸರ್ಕಾರದ ಜನತೆಯ ಮೇಲಿನ ನಿರ್ಲಕ್ಷ್ಯ ಮನೋಭಾವ ತೋರುತ್ತದೆ ತೈಲ ಬೆಲೆ ಏರಿಕೆಯನ್ನು ಮಾಡದೆ ಮೊದಲಿನಂತೆ ಯಥಾ ಸ್ಥಿತಿ ಕಾಪಾಡಬೇಕು ಎಂದು ಬಿಜೆಪಿ ಪಕ್ಷದ ತಾಲೂಕು ಪದಾಧಿಕಾರಿಗಳು ಮಾತನಾಡಿ ಸರ್ಕಾರದ ತೈಲ ಬೆಲೆ ಕುರಿತಾಗಿ ಸರ್ಕಾರದ ನಿರ್ಧಾರದ ವಿರುದ್ಧ ಇಂದು ಬೆಳಿಗ್ಗೆ ಮಹಾತ್ಮಾ ಗಾಂಧೀಜಿ ಪವಿತ್ರ ಚಿತಾಭಸ್ಮ ರಾಷ್ಟ್ರೀಯ ಹುತಾತ್ಮರ ಸ್ಮಾರಕದಿಂದ ತಾಲ್ಲೂಕು ಕಚೇರಿಗೆ ತಲುಪುವ ಸಂದರ್ಭದಲ್ಲಿ ಪ್ರಮುಖ ಬೀದಿ, ವೃತ್ತಗಳಲ್ಲಿ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಪ್ರತಿಭಟಿಸಿದರು. ಈ ಸಂದರ್ಭದಲ್ಲಿ ಕೂಡ್ಲಿಗಿ ತಾಲೂಕು ಬಿಜೆಪಿ ಘಟಕ ಸೇರಿದಂತೆ ಮುಖಂಡರು, ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ವಿವಿಧ ಕ್ಷೇತ್ರದ ಸಾಧಕರಿಗೆ ಧೈರ್ಯನಿಧಿ ಪ್ರಶಸ್ತಿ ಪ್ರದಾನ



ಕಲಬುರಗಿ:–

ತಮ್ಮ ಜೀವನುದ್ದಕ್ಕೂ ವೀರಶೈವ ಸಮಾಜಕ್ಕಾಗಿ ನಿಸ್ವಾರ್ಥ ಹಾಗೂ ಪ್ರಾಮಾಣಿಕ ಸೇವೆ ಸಲ್ಲಿಸಿದ ಲಿಂ. ಡಿ.ವಿ. ಪಾಟೀಲ ರ ಕೊಡುಗೆ ಅನನ್ಯವಾಗಿದೆ ಎಂದು ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷರೂ ಆದ ಎಂಎಲ್ಸಿ ಶಶೀಲ್ ಜಿ ನಮೋಶಿ ಹೇಳಿದರು.

ಜಿಲ್ಲಾ ವೀರಶೈವ ಮಹಾಸಭಾದ ಅಧ್ಯಕ್ಷರಾಗಿದ್ದ ಲಿಂ. ಡಿ.ವಿ. ಪಾಟೀಲ ಅವರ ಸ್ಮರಣಾರ್ಥ ವಿವಿಧ ಕ್ಷೇತ್ರದ ಸಾಧಕರಿಗೆ ಧೈರ್ಯನಿಧಿ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸುಮಾರು ಐವತ್ತು ವರ್ಷಗಳ ಕಾಲ ವೀರಶೈವ ಸಮಾಜವನ್ನು ಸಂಘಟನೆಗೊಳಿಸಿ ಬಸವ ತತ್ವ ಪ್ರಚಾರ ಮಾಡಿದವರು. ಆ ಮೂಲಕ ಸರ್ವ ಸಮಾಜದ ಜನರನ್ನು ಅಪ್ಪಿಕೊಂಡು ಬದುಕಿದ್ದು ಎಲ್ಲರಿಗೂ ಮಾದರಿಯಾಗಿದ್ದಾರೆ ಎಂದು ಹೇಳಿದ ಅವರು, ಡಿ.ವಿ. ಪಾಟೀಲ ರ ಕುಟುಂಬಕ್ಕೆ ಸಹಾಯ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಜಿಲ್ಲಾ ಕಸಾಪ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಮಾತನಾಡಿ, ನಗರದ ರಸ್ತೆಯೊಂದಕ್ಕೆ ಅಥವಾ ನಗರದಲ್ಲಿ ನಿರ್ಮಿಸಲ್ಪಟ್ಟಿರುವ ವೀರಶೈವ ಸಮಾಜದಡಿಯಲ್ಲಿನ ವೀರಶೈವ ವಿದ್ಯಾರ್ಥಿ ವಸತಿ ನಿಲಯಕ್ಕೆ ಲಿಂಗೈಕ್ಯ ಡಿ.ವಿ.ಪಾಟೀಲ ಅವರ ಹೆಸರನ್ನು ಇಡುವ ಮೂಲಕ ಅವರನ್ನು ಶಾಶ್ವತವಾಗಿ ಜೀವಂತವಾಗಿಡುವ ಕಾರ್ಯವಾಗಲಿ. ಆ ಮೂಲಕ ಡಿ.ವಿ.ಪಾಟೀಲ ಅವರ ಸಾಮಾಜಿಕ ಸೇವೆಯನ್ನು ಸ್ಮರಿಸುವ ಕಾರ್ಯ ಮಾಡಬೇಕಾಗಿದೆ ಎಂದರು.

ಜಿಲ್ಲಾ ವೀರಶೈವ ಸಮಾಜದ ಅಧ್ಯಕ್ಷ ಅರುಣಕುಮಾರ ಎಸ್ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಬಸವೇಶ್ವರ ಸಹಕಾರ ಬ್ಯಾಂಕಿನ ನಿರ್ದೇಶಕಿ ಸುಶೀಲಾಬಾಯಿ ಡಿ.ವಿ. ಪಾಟೀಲ, ಪ್ರಮುಖರಾದ ಶರಣಬಸಪ್ಪ ಬೆಣ್ಣೂರ, ಶರಣು ಪಪ್ಪಾ, ಅಶ್ವಿನ್ ಸಂಕಾ, ಪ್ರತಿಷ್ಠಾನದ ಅಧ್ಯಕ್ಷ ಶ್ರೀಕಾಂತ ಪಾಟೀಲ ತಿಳಗೂಳ, ಕಾರ್ಯಾಧ್ಯಕ್ಷ ಪ್ರಭವ ಪಟ್ಟಣ–ಕರ್, ರವೀಂದ್ರಕುಮಾರ ಭಂಟನಳ್ಳಿ, ಧರ್ಮಣ್ಣ ಎಚ್ ಧನ್ನಿ, ಶರಣರಾಜ್ ಛಪ್ಪರಬಂದಿ, ಮಹಾಂತೇಶ ಪಾಟೀಲ, ಮಹೇಶ ಚಿಂತನಪಳ್ಳಿ , ಧರ್ಮರಾಜ ಜವಳಿ, ಮಲ್ಲಿನಾಥ ಸಂಗಶೆಟ್ಟಿ ವೇದಿಕೆ ಮೇಲಿದ್ದರು.

ವಿವಿಧ ಕ್ಷೇತ್ರದ ಪ್ರಮುಖರಾದ ಸಾಹಿತಿ ಡಾ. ಸೂರ್ಯಕಾಂತ ಪಾಟೀಲ ಸರಸಂಬಾ, ಮಾಜಿ ಮೇಯರ್ ದಶರಥ ಬಾಬು ವಂಟಿ, ದೇವೇಗೌಡ ತೆಲ್ಲೂರ, ಮಲ್ಲಣ್ಣ ಮಡಿವಾಳ, ನೀಲಕಂಠ ಎಂ ಜಮಾದಾರ, ಅನ್ನಪೂರ್ಣ ಮಲ್ಲಿನಾಥ ಸಂಗಶೆಟ್ಟಿ ರಾಜಾಪೂರ ಅವರನ್ನು ಧೈರ್ಯನಿಧಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

# ನೀರು ಪೂರೈಕೆಗೂ ಯೋಗ್ಯತೆ ಇಲ್ಲದ ಸರಕಾರ: ಅಶೋಕ್ ಟೀಕೆ



ಕಲಬುರಗಿ:–

ಸರಕಾರಿ ಆಸ್ಪತ್ರೆಗಳಲ್ಲಿ ಜೀವ ಉಳಿಸುವ ಕಾರಣಕ್ಕಾಗಿ ಕೈಗೊಳ್ಳುವ ಶಸ್ತ್ರಚಿಕಿತ್ಸೆಗೂ ನೀರು ಪೂರೈಸಲಾಗದಷ್ಟು ರಾಜ್ಯ ಸರಕಾರ ಯೋಗ್ಯತೆ ಕಳೆದುಕೊಂಡಿದೆ ಎಂದು ಪ್ರತಿಪಕ್ಷದ ನಾಯಕ ಹಾಗೂ ಮಾಜಿ ಉಪಮುಖ್ಯಮಂತ್ರಿ ಆರ್.ಅಶೋಕ್ ಟೀಕಿಸಿದರು.

ಇಲ್ಲಿನ ಜಿಮ್ಸ್ ಮತ್ತು ಜಯದೇವ ಆಸ್ಪತ್ರೆಗೆ ಭೇಟಿ ಕೊಟ್ಟ ನಂತರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅಶೋಕ್, ಕಲಬುರಗಿಯ ಜಯದೇವ ಹೃದ್ರೋಗ ಚಿಕಿತ್ಸಾ ಆಸ್ಪತ್ರೆಯಲ್ಲಿ ಇದೇ ಜೂನ್ 16, 17, 18ರಂದು ಸಮರ್ಪಕವಾಗಿ ನೀರು ಪೂರೈ–ಕೆಯಾಗದ ಕಾರಣಕ್ಕಾಗಿ ತುರ್ತು ಹೃದಯ ಶಸ್ತ್ರಚಿಕಿತ್ಸೆಗಳನ್ನು ಸಹ ಕೈಗೊಳ್ಳಲಾಗಿಲ್ಲ. ಹೃದಯದ ಸಮಸ್ಯೆ ಕಂಡುಬಂದಾಗ ಚಿಕಿತ್ಸೆಯ ದೃಷ್ಟಿಯಿಂದ ಪ್ರತಿ ಕ್ಷಣವೂ ಮುಖ್ಯ ಎನಿಸಿಕೊಳ್ಳುತ್ತದೆ. ಹೀಗಿರುವಾಗ ಈ ಮೂರು ದಿನಗಳ ಕಾಲ ತುರ್ತು ಹೃದಯ ಶಸ್ತ್ರಚಿಕಿತ್ಸೆ ಕೈಗೊಳ್ಳದೆ ಜನರ ಜೀವಗಳೊಂದಿಗೆ ಚೆಲ್ಲಾಟ ಆಡಲಾಗಿದೆ. ಆ ಮೂಲಕ ರಾಜ್ಯ ಸರಕಾರ ತನ್ನ ವೈಫಲ್ಯ ಎತ್ತಿ ತೋರಿಸಿದೆ ಎಂದು ವಾಗ್ದಾಳಿ ನಡೆಸಿದರು.

ಇಡೀ ದೇಶದಲ್ಲಿ ಅತ್ಯಂತ ಮುಂದುವರೆದ ರಾಜ್ಯ ಎಂಬ ಹೆಸರು ಕರ್ನಾಟಕ ರಾಜ್ಯಕ್ಕಿದೆ. ಅದರಲ್ಲೂ ದೇಶ–ವಿದೇಶಗಳಿಂದ ನಮ್ಮ ಜಯದೇವ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ಜನರು ಬರುತ್ತಾ–ರೆ. ಹೀಗಿರುವಾಗ ಆಸ್ಪತ್ರೆಗೆ ನೀರು ಒದಗಿಸಲು ಸಹ ದುಡ್ಡು ಇಲ್ಲದಷ್ಟು ರಾಜ್ಯ ಸರಕಾರ ಪಾಪರ್ ಆಗಿದೆ ಎಂದು ವ್ಯಂಗ್ಯವಾಡಿದರು.

ರಾಜ್ಯ ಸರ್ಕಾರ ಬದುಕಿದೆಯೋ ಸತ್ತಿದೆಯೋ ಗೊತ್ತಿಲ್ಲದಂತಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರಕ್ಕೆ ನೀರು ಕೊಡುವ ಯೋಗ್ಯತೆಯೂ ಇಲ್ಲದಂತಾಗಿದೆ. ವಾಸ್ತವದಲ್ಲಿ ಪೇಷಂಗಳ ಬದಲು ರಾಜ್ಯ ಸರಕಾರವೇ ಐಸಿಯು ಸೇರಿದೆ ಕುಟುಕಿದರು.

ಮುಖ್ಯಮಂತ್ರಿಗಳ ಮನೆಯಲ್ಲಿ ಕೆಂಪು ನೀರು ಬಂದ ಕಾರಣ–ಕ್ಕಾಗಿ ಎಷ್ಟು ಅಧಿಕಾರಿಗಳು ಸಸ್ಪೆಂಡ್ ಆಗಿದ್ದಾರೆ ಎಂಬುದು ಎಲ್ಲರಿಗೂ ಗೊತ್ತಿದೆ. ಹೀಗಿರುವಾಗ ಕಲಬುರಗಿಯ ಜಿಮ್ಸ್ ಮತ್ತು ಜಯದೇವ ಆಸ್ಪತ್ರೆಗೆ ಎದುರಾದ ನೀರಿನ ಸಮಸ್ಯೆ ಕುರಿತಂತೆ ಎಷ್ಟು ಮಂದಿಸಸ್ಪೆಂಡ್ ಆಗಿದ್ದಾರೆ? ಎಂದು ಅಶೋಕ್ ಪ್ರಶ್ನಿಸಿದರು.

ಇಷ್ಟೆಲ್ಲಾ ಪರಿಸ್ಥಿತಿ ಹದಗೆಟ್ಟಿದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅವಲೋಕನಾ ಸಭೆ ನಡೆಸಿಲ್ಲ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗಂತೂ ಆಗಲೇ ಚೆನ್ನಪಟ್ಟಣ ಉಪಚುನಾವಣೆ ಚಿಂತೆ ಆವರಿಸಿಕೊಂಡಿದೆ. ಹಾಗಾಗಿ, ಅವರು ಚನ್ನಪಟ್ಟಣದ ಕಡೆಗೆ ಹೊರಟು ನಿಂತಿದ್ದಾರೆ ಎಂದು ಅಚ್ಚರಿ ವ್ಯಕ್ತಪಡಿಸಿದರು.

ಕಲಬುರಗಿಯ ಜಿಮ್ಸ್ ಮತ್ತು ಜಯದೇವ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕಾದ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಬೆಂಗಳೂರಿನ ಆಸ್ಪತ್ರೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ನಿರ್ಲಕ್ಷ್ಯದ ಕುರಿತು ಸರ್ಕಾರ ಮತ್ತು ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದು ಕ್ರಮಕ್ಕೆ ಒತ್ತಾಯಿಸುವುದಲ್ಲದೆ, ಎಲ್ಲರನ್ನೂ ವಿಧಾನಸೌಧದ ಕಟಕಟೆಯಲ್ಲಿ ನಿಲ್ಲಿಸುವುದಾಗಿ ಎಚ್ಚರಿಕೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಶಶಿಲ್ ನಮೋಶಿ, ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ರೇವೂರ್, ಬಿಜೆಪಿ ಜಿಲ್ಲಾಧ್ಯಕ್ಷ ಶಿವರಾಜ ಪಾಟೀಲ್ ರದ್ದೇವಾಡಿ, ಮಾಜಿ ಸಚಿವ ಬಾಬುರಾವ್ ಚವ್ಹಾಣ, ಬಿಜೆಪಿ ನಾಯಕರಾದ ಶರಣಪ್ಪ ತಳವಾರ್, ಅವ್ವಣ್ಣ ಮ್ಯಾಕೇರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಾರಿಗೆ ವ್ಯವಸ್ಥೆ ಸುಧಾರಣೆಗೆ ಹೆಚ್ಚಿನ ಒತ್ತು: ಶಾಸಕ ಡಾ.ಎನ್.ಟಿ.ಶ್ರೀನಿವಾಸ್




ಕೂಡ್ಲಿಗಿ:–

ಹಿಂದುಳಿದ ತಾಲೂಕಿನ ಗಡಿಭಾಗದ ಗ್ರಾಮೀಣ ಜನರಿಗೆ ಬಸ್ ಸಂಚಾರ ಸೌಲಭ್ಯ ಕಲ್ಪಿಸಲು ಹೆಚ್ಚಿನ ಆದ್ಯತೆ ನೀಡಲಾಗಿ ಅದರಂತೆ ಶಾಸಕನಾದ ಒಂದು ವರ್ಷದ ಅವಧಿಯಲ್ಲಿ ಕೂಡ್ಲಿಗಿಯ ಸಾರಿಗೆ ಸಂಸ್ಥೆ ಘಟಕ–ಕ್ಕೆ 19 ನೂತನ ಬಸ್‌ಗಳು ತರಲು ಶ್ರಮಿಸಿದ್ದು, ಇನ್ನಷ್ಟು ನೂತನ ಬಸ್‌ಗಳಿಗೆ ಸಾರಿಗೆ ಸಚಿವರೊಂದಿಗೆ ಚರ್ಚೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಕೂಡ್ಲಿಗಿ ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ತಿಳಿಸಿದರು.

ಅವರು ಪಟ್ಟಣದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಕೂಡ್ಲಿಗಿ ಬಸ್ ನಿಲ್ದಾಣದಲ್ಲಿ ನೂತನ ನಾಲ್ಕು ಬಸ್‌ಗಳ ಸಂಚಾರಕ್ಕೆ ಬುಧವಾರ ಚಾಲನೆ ನೀಡಿ ಮಾತನಾಡುತ್ತಾ ಕೋವಿಡ್ 19ರ ಸಮಯದಲ್ಲಿ ತಾಲೂಕಿನ ನಾನಾ ಭಾಗಗಳ ಮಾರ್ಗದ ಬಸ್ ಸಂಚಾರ ಸ್ಥಗಿತಗೊಳಿಸಲಾಗಿತ್ತು. ಇದರಿಂದ ತಾಲೂಕಿನ ಗಡಿ ಸೇರಿ ನಾನಾ ಹಳ್ಳಿಗಳ ಜನರು ಪರ ಊರುಗಳಿಗೆ ಹೋಗಿ ಬರಲು ತುಂಬಾ ಕಷ್ಟ ಪಡುತ್ತಿದ್ದರು. ನಾನು ಕ್ಷೇತ್ರದ ಶಾಸಕನಾದ ನಂತರ ಹಳ್ಳಿಗಳ ಜನರ ಸಮಸ್ಯೆಗಳನ್ನು ಖುದ್ದಾಗಿ ಆಲಿಸುವ ಮೂಲಕ ಸಾರ್ವಜನಿಕರಿಗೆ ಅನುಕೂಲವಾಗಲು ಬಹುತೇಕ ಹಳೆಯ ಮಾರ್ಗಗಳ ಜತೆ ಹೊಸ ಮಾರ್ಗಗಳಿಗೆ ಬಸ್ ಸಂಚಾರದ ವ್ಯವಸ್ಥೆ ಕಲ್ಪಿಸಲಾಗಿದೆ. ಇನ್ನೂ ಹೆಚ್ಚಿನ ಹೊಸ ಬಸ್‌ಗಳನ್ನು ತಾಲೂಕಿಗೆ ತರುವ ನಿಟ್ಟಿನಲ್ಲಿ ಸಾರಿಗೆ ವ್ಯವಸ್ಥೆಯನ್ನು ಸುಧಾರಣೆ ಮಾಡಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಗುಂಡುಮುಣುಗು ತಿಪ್ಪೇಸ್ವಾಮಿ, ರಸ್ತೆ ಸಾರಿಗೆ ಸಂಸ್ಥೆ ಕೂಡ್ಲಿಗಿ ಘಟಕ ವ್ಯವಸ್ಥಾಪಕ ಮರಿಲಿಂಗಪ್ಪ, ಪಪಂ ಸದಸ್ಯ ಕಾವಲಿ ಶಿವಪ್ಪನಾಯಕ, ಮುಖಂಡರಾದ ದಿನ್ನೆ ಮಲ್ಲಿಕಾರ್ಜುನ, ಎನ್.ವಿ.ತಮ್ಮಣ್ಣ, ಹೋಟೆಲ್ ಬಾಲರಾಜಣ್ಣ, ಡಾಣಿ ರಾಘವೇಂದ್ರ, ಜಿಲಾನ್, ಬಣವಿಕಲ್ಲು ಯರಿಸ್ವಾಮಿ, ವೀರಭದ್ರಪ್ಪ, ಉಪ್ಪಾರ ರಾಘವೇಂದ್ರ, ಶೋಭಾ, ಸಿ.ಎಸ್.ಪುರ ಬಸವರಾಜ, ಮೇಲ್ವಿಚಾರಕರಾದ ಎಚ್.ಕೆ.ವಿಶ್ವನಾಥ, ಜಿ.ಮಾರುತಿ, ಸಂಚಾರ ನಿಯಂತ್ರಕರಾದ ಬಣವಿಕಲ್ಲು ಶರಣಪ್ಪ, ರತ್ನಮ್ಮ, ಜ್ಯೋತಿ ಸೇರಿ ತಾಂತ್ರಿಕ ಸಿಬ್ಬಂದಿ ವನಜ ನೇತ್ರ ಉಷಾ, ವಾಣಿ ಬಾನು ಭುವನೇಶ್ವರಿ ಇತರರಿದ್ದರು.

# ಅತೀವೃಷ್ಟಿಯಿಂದಾದ ಹಾನಿ: ಸಭೆ



ಗದಗ:–

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್.ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಡಳಿತ ಭವನದಲ್ಲಿ ಪ್ರಸಕ್ತ ಸಾಲಿನ ಅತೀವೃಷ್ಟಿಯಿಂದಾದ ಹಾನಿಯ ಕುರಿತು ಸಭೆ ಜರುಗಿತು.

ಅಧಿಕ ಮಳೆಯಿಂದಾಗುವ ಅತೀವೃಷ್ಟಿ ನಿಯಂತ್ರಣಕ್ಕೆ ಜಿಲ್ಲೆಯ ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ಇಲಾಖೆಗೆ ಸಂಬಂಧಪಟ್ಟ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಮೂಲಕ ಜನಜಾನುವಾರುಗಳ ಜೀವಹಾನಿ ತಡೆಗೆ ಮುಂದಾಗಬೇಕು ಹಾಗೂ ಸಾರ್ವಜನಿಕರ ಆಸ್ತಿ ಪಾಸ್ತಿ ಹಾನಿ ತಪ್ಪಿಸಲು ಅಗತ್ಯದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದರು.

ಅತೀವೃಷ್ಟಿಯಿಂದ ಪ್ರವಾಹ ಉಂಟಾಗಬಹುದಾದ ಜಿಲ್ಲೆಯ 11 ಗ್ರಾಮಗಳು ಹಾಗೂ ನಗರ ಪ್ರದೇಶದ 14 ವಾರ್ಡಗಳನ್ನು ಗುರುತಿಸಲಾಗಿದೆ. ಅಧಿಕ ಪ್ರಮಾಣದ ಮಳೆ ಸುರಿದಲ್ಲಿ ತಕ್ಷಣ ಅಧಿಕಾರಿಗಳು ಗುರುತಿಸಲಾದ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿ ನಿಯಂತ್ರಣ ಕುರಿತಂತೆ ಕ್ರಮ ವಹಿಸಬೇಕು ಎಂದರು. ಜಿಲ್ಲೆಯಲ್ಲಿ ಹರಿದಿರುವ ಮಲಪ್ರಭಾ ನದಿ ಹಾಗೂ ಬೆಣ್ಣೆ ಹಳ್ಳ ಪ್ರವಾಹದಿಂದ ನರಗುಂದ ತಾಲೂಕಿನ 16 ಹಾಗೂ ರೋಣ ತಾಲೂಕಿನ 16 ಗ್ರಾಮಗಳು ಪ್ರವಾಹಕ್ಕೊಳಗಾಗುವ ಸಂಭವವಿದ್ದು ಆ ಭಾಗದ ಅಧಿಕಾರಿಗಳು ನಿರಂತರ ನಿಗಾ ವಹಿಸಬೇಕು. ತುಂಗಭದ್ರಾ ನದಿ ಪ್ರವಾಹದಿಂದ ಶಿರಹಟ್ಟಿ ತಾಲೂಕಿನ 10 ಹಾಗೂ ಮುಂಡರಗಿ ತಾಲೂಕಿನ 11 ಗ್ರಾಮಗಳು ಬಾಧಿತ ವಾಗುವ ಹಳ್ಳಿಗಳೆಂದು ಗುರುತಿಸಲಾಗಿದ್ದು ಅಲ್ಲಿಯೂ ಸಹ ಅಧಿಕಾರಿಗಳು ನಿರಂತರ ನಿಗಾ ವಹಿಸುವ ಮೂಲಕ ಜೀವ ಹಾನಿ ತಡೆಗೆ ಮುಂದಾಗುವಂತೆ ಸೂಚಿಸಿದರು.

ಮಲಪ್ರಭಾ ಹಾಗೂ ಬೆಣ್ಣೆಹಳ್ಳ ಪ್ರವಾಹದಿಂದ ಹಾನಿಗೊಳಗಾಗಬಹುದಾದ ಜನವಸತಿ ಪ್ರದೇಶಗಳಲ್ಲಿ ಅಗತ್ಯವಿದ್ದಲ್ಲಿ ಕಾಳಜಿ ಕೇಂದ್ರ ತೆರೆಯಲು ಈಗಾಗಲೇ ನರಗುಂದ ತಾಲೂಕಿನ 12, ರೋಣ ತಾಲೂಕಿನ 16 ಸ್ಥಳಗಳನ್ನು ಗುರುತಿಸಲಾಗಿದೆ. ಅದೇ ತರಹ ಮುಂಡರಗಿ ತಾಲೂಕಿನ 8, ಶಿರಹಟ್ಟಿ ತಾಲೂಕಿನ 10 ಸ್ಥಳಗಳನ್ನು ಗುರುತಿಸಿದೆ.ಅದರಂತೆ 4 ಗೋಶಾಲೆ ತೆರೆಯಲು ಸ್ಥಳ ನಿಗದಿಪಡಿಸಿ ಇಟ್ಟುಕೊಳ್ಳಲಾಗಿದೆ ಎಂದರು. ಅತೀವೃಷ್ಟಿಯಿಂದಾಗುವ ಮನೆ ಹಾಗೂ ಬೆಳೆ ಹಾನಿಗೆ ಸರ್ಕಾರದ ನಿರ್ದೇಶನದಂತೆ ಕ್ರಮ ವಹಿಸಿ ಪರಿಹಾರ ವಿತರಣೆ ಮಾಡಬೇಕು. ಅಗತ್ಯವಿದ್ದಲ್ಲಿ ಜಂಟಿ ಸಮೀಕ್ಷೆ ಮೂಲಕ ಹಾನಿಯ ಪ್ರಮಾಣ ಗುರುತಿಸಿ ಪರಿಹಾರಕ್ಕೆ ಮುಂದಾಗುವಂತೆ ಸೂಚಿಸಿದರು. ದಿಢೀರ್ ಅತೀವೃಷ್ಟಿಯಿಂದ ಗ್ರಾಮಗಳು ಜಲಾವೃತವಾದಲ್ಲಿ ತಕ್ಷಣ ಅಗ್ನಿಶಾಮಕ ಇಲಾಖೆ ಅಧಿಕಾರಿಗಳು ರಕ್ಷಣಾ ಸಾಮಗ್ರಿಗಳೊಂದಿಗೆ ಸ್ಥಳಕ್ಕೆ ತೆರಳಿ ರಕ್ಷಣಾ ಕಾರ್ಯಾಚರಣೆ ಮಾಡಬೇಕು. ಕಾರ್ಯಾಚರಣೆಗೆ ಅಗತ್ಯವಿರುವ ಸಾಮಗ್ರಿಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳುವಂತೆ ಸೂಚಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ವೆಂಕಟೇಶ ನಾಯ್ಕ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೊಡ್, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ, ಪ್ರಾದೇಶಿಕ ಸಾರಿಗೆ ಅಧಿಕಾರಿ ಮಂಜುನಾಥ ಶಿರಾಳ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

Editor:S.K.Wadeyar,#378/379, “MAYAGAPPA COMPLEX” 1st Stage 6th Phase Industrial Town west of chord Road Rajajinagar Bengaluru-560044.Karnataka.
Publisher:S.K.Wadeyar,#378/379, “MAYAGAPPA COMPLEX” 1st Stage 6th Phase Industrial Town west of chord Road Rajajinagar Bengaluru-560044.Karnataka.
Printer:SUCHITHRA PRINTER’s & PUBLISHER’s,#378/379, “MAYAGAPPA COMPLEX” 1se Stage 6th Phase Industrial Town west of chord Road Rajajinagar Bengaluru-560044.Karnataka.
Owner:S.K.Wadeyar,#378/379, “MAYAGAPPA COMPLEX” 1se Stage 6th Phase Industrial Town west of chord Road Rajajinagar Bengaluru-560044.Karnataka.